ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 207 RNI Number : KNKAN/25/A2770 07-08-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :207 ರಾಯಚೂರು 07-08-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ಸಂಸತ್ತಿನ ಮಳೆಗಾಲದ ಅಧಿವೇಶನ : ದಿನಕ್ಕೆ 9 ಕೋಟಿ ವೆಚ್ಚ, ಗದ್ದಲಕ್ಕೆ ಶೇ.95ರಷ್ಟು ಸಮಯ ಬಲಿ

ನವದೆಹಲಿ,ಆ.6-ಸಂಸತ್ತಿನ ಮಳೆಗಾಲದ ಅಧಿವೇಶನವು ನಿರಂತರ ಗದ್ದಲ, ಪ್ರತಿಭಟನೆ ಮತ್ತು ಮುಂದೂಡಿಕೆಗಳಿಂದಾಗಿ ಪರಿಣಾಮ ಕಾರಿತ್ವ ಕಳೆದುಕೊಳ್ಳುತ್ತಿರುವ ಕುರಿತು ಮತ್ತೆ ಚರ್ಚೆ ಆರಂಭವಾಗಿದೆ. ಜುಲೈ 20ರಿಂದ ಆಗಸ್ಟ್ 13ರವರೆಗೆ ನಡೆಯುತ್ತಿರುವ ಈ ಅಧಿವೇಶನದಲ್ಲಿ ನಿಗದಿಪಡಿಸಿದ ಕಲಾಪದ ಬಹುಪಾಲು ಸಮಯವು ವ್ಯರ್ಥವಾಗಿದ್ದು, ಸಾರ್ವಜನಿಕ ಹಣದ ಬಳಕೆಯ ಬಗ್ಗೆ ಪ್ರಶ್ನೆಗಳು ಎದ್ದಿವೆ.

ಅಂದಾಜುಗಳ ಪ್ರಕಾರ, ಸಂಸತ್ತಿನ ಒಂದು ದಿನದ ಕಲಾಪ ನಡೆಸಲು ಸುಮಾರು 9 ಕೋಟಿ ವೆಚ್ಚವಾಗುತ್ತದೆ. ಇದರಲ್ಲಿ ಸಂಸತ್ ಸಿಬ್ಬಂದಿ, ಭದ್ರತಾ ವ್ಯವಸ್ಥೆ, ಮೂಲಸೌಕರ್ಯ, ಆಡಳಿತಾತಕ ವೆಚ್ಚಗಳು ಮತ್ತು ಸಂಸದರ ಭತ್ಯೆಗಳು ಸೇರಿವೆ. ಪ್ರತಿ ನಿಮಿಷದ ಕಲಾಪಕ್ಕೆ ಸರಾಸರಿ 2.5 ಲಕ್ಷ ವೆಚ್ಚವಾಗುತ್ತದೆ ಎಂಬ ಅಂದಾಜಿದೆ.

ಆಗಸ್ಟ್ 4ರವರೆಗೆ ನಡೆದ 12 ಕಲಾಪ ದಿನಗಳಲ್ಲಿ ಲೋಕಸಭೆ ಮತ್ತು ರಾಜ್ಯಸಭೆಗಳು ನಿಗದಿತ ಸಮಯದ ಅತ್ಯಲ್ಪ ಭಾಗ ಮಾತ್ರ ಕಾರ್ಯನಿರ್ವಹಿಸಿವೆ. ಲಭ್ಯ ಮಾಹಿತಿಯ ಪ್ರಕಾರ, ಲೋಕಸಭೆಯಲ್ಲಿ ಸುಮಾರು 1.6 ಗಂಟೆಗಳಷ್ಟು ಮಾತ್ರ ಪರಿಣಾಮಕಾರಿ ಕಲಾಪ ನಡೆದಿದ್ದು, ಇದು ನಿಗದಿತ ಸಮಯದ ಶೇ.5ರಷ್ಟಾಗಿದೆ. ರಾಜ್ಯಸಭೆಯಲ್ಲಿಯೂ ಸುಮಾರು 1.7 ಗಂಟೆಗಳ ಚರ್ಚೆ ಮಾತ್ರ ನಡೆದಿದ್ದು, ಇದು ಒಟ್ಟು ಸಮಯದ ಶೇ.6ರಷ್ಟಾಗಿದೆ.

ಪ್ರಶ್ನೋತ್ತರ ಅವಧಿ ಮತ್ತು ಶೂನ್ಯ ವೇಳೆಯಂತಹ ಸಂಸತ್ತಿನ ಪ್ರಮುಖ ಭಾಗಗಳು ಹಲವು ದಿನಗಳಲ್ಲಿ ನಡೆಯದೇ ಹೋಗಿವೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ, ರಾಮ ಮಂದಿರಕ್ಕೆ ಸಂಬಂಧಿಸಿದ ಆರೋಪಗಳು ಸೇರಿದಂತೆ ಹಲವು ವಿಷಯಗಳ ಕುರಿತು ವಿರೋಧ ಪಕ್ಷಗಳ ಪ್ರತಿಭಟನೆ ಹಾಗೂ ಆಡಳಿತ ಪಕ್ಷದ ಆಕ್ಷೇಪಣೆಗಳಿಂದಾಗಿ ಸದನದಲ್ಲಿ ಗದ್ದಲ ಉಂಟಾಗಿದೆ. ಜುಲೈ 27ರಂದು ಎರಡೂ ಸದನಗಳನ್ನು ಇಡೀ ದಿನ ಮುಂದೂಡಲಾಗಿತ್ತು. ಜುಲೈ 31ರಂದು ಕೆಲವು ಪ್ರಮುಖ ಶಾಸನಾತಕ ಕಾರ್ಯಗಳು ನಡೆದರೂ, ನಿಗದಿತ ಸಮಯಕ್ಕೂ ಮುನ್ನವೇ ಕಲಾಪವನ್ನು ಮುಕ್ತಾಯಗೊಳಿ ಸಲಾಯಿತು.

ಸಾರ್ವಜನಿಕ ಹಣದ ನಷ್ಟದ ಚರ್ಚೆ:

ಕಲಾಪದ ಬಹುತೇಕ ಸಮಯ ಮುಂದೂಡಿಕೆಗೆ ಒಳಗಾದ ಹಿನ್ನೆಲೆಯಲ್ಲಿ, ಈ ಅಧಿವೇಶನದಲ್ಲಿ ಮಾತ್ರವೇ ಸುಮಾರು 150 ಕೋಟಿಯಿಂದ 190 ಕೋಟಿವರೆಗೆ ಸಾರ್ವಜನಿಕ ಹಣದ ಬಳಕೆ ಪರಿಣಾಮಕಾರಿಯಾಗಿಲ್ಲ ಎಂಬ ಅಂದಾಜು ವ್ಯಕ್ತವಾಗಿವೆ.

ಸಂಸತ್ತಿನ ಕಲಾಪಕ್ಕೆ ಸಂಬಂಧಿಸಿದ ವೆಚ್ಚವು ಕೇವಲ ಹಣದ ಪ್ರಶ್ನೆಯಲ್ಲದೆ, ಜನರ ಸಮಸ್ಯೆಗಳನ್ನು ಚರ್ಚಿಸಲು ದೊರೆಯುವ ಅವಕಾಶದ ನಷ್ಟವೂ ಆಗಿದೆ ಎಂದು ತಜ್ಞರು ಅಭಿಪ್ರಾಯಪಡುತ್ತಾರೆ. ಸಂಸತ್ ಸಮಯವು ದೇಶದ ಆಡಳಿತ



ವ್ಯವಸ್ಥೆಯಲ್ಲಿ ಅತ್ಯಂತ ಮೌಲ್ಯಯುತ ಸಂಪನೂಲವಾಗಿದ್ದು, ಅದನ್ನು ಸಮರ್ಪಕವಾಗಿ ಬಳಸುವ ಜವಾಬ್ದಾರಿ ಎಲ್ಲಾ ಪಕ್ಷಗಳ ಮೇಲಿದೆ.

ಸಂಸತ್ ಕಲಾಪಗಳಲ್ಲಿ ಅಡ್ಡಿಪಡಿ ಸುವ ಘಟನೆಗಳು ಹೊಸದಲ್ಲ. ಕಳೆದ ಹಲವು ವರ್ಷಗಳಿಂದಲೂ ವಿವಿಧ ರಾಜಕೀಯ ಪಕ್ಷಗಳು ಪ್ರತಿಭಟನೆಗಳ ಮೂಲಕ ಸದನದ ಕಾರ್ಯಚಟುವಟಿಕೆಗಳಿಗೆ ಅಡ್ಡಿಯಾಗಿ ರುವ ಉದಾಹರಣೆಗಳಿವೆ.

2023ರ ಚಳಿಗಾಲದ ಅಧಿವೇಶನ ದಲ್ಲಿ ಪ್ರತಿಪಕ್ಷಗಳ ಪ್ರತಿಭಟನೆಗಳ ನಡುವೆ ಹಲವು ಸಂಸದರನ್ನು ಅಮಾನತು ಮಾಡಲಾಗಿತ್ತು. 2024ರ ಬಜೆಟ್ ಮತ್ತು ಮಳೆಗಾಲದ ಅಧಿವೇಶನಗಳಲ್ಲಿಯೂ ಗದ್ದಲದಿಂದಾಗಿ ಅನೇಕ ಕಲಾಪಗಳು ವ್ಯರ್ಥವಾಗಿದ್ದವು. 2025ರ ಮಳೆಗಾಲದ ಅಧಿವೇಶನವೂ ಕಡಿಮೆ ಪರಿಣಾಮಕಾರಿ ಅಧಿವೇಶನಗಳಲ್ಲಿ ಒಂದಾಗಿ ಗುರುತಿಸಲ್ಪಟ್ಟಿತ್ತು.

ಅಂಗೀಕಾರಗೊಂಡ ಪ್ರಮುಖ ಮಸೂದೆಗಳು:

ಗದ್ದಲದ ನಡುವೆಯೂ ಈ ಅಧಿವೇಶನದಲ್ಲಿ ಕೆಲವು ಪ್ರಮುಖ ಮಸೂದೆಗಳಿಗೆ ಅನುಮೋದನೆ ದೊರೆತಿದೆ.ರಾಷ್ಟ್ರೀಯ ಗೌರವಕ್ಕೆ ಅವಮಾನ ಗಳ ತಡೆಗಟ್ಟುವಿಕೆ ಸಂಬಂಧಿತ ಮಸೂದೆಯ ಮೂಲಕ ರಾಷ್ಟ್ರಧ್ವಜ, ಸಂವಿಧಾನ, ರಾಷ್ಟ್ರಗೀತೆ ಮತ್ತು ವಂದೇ ಮಾತರಂಗೆ ಅವಮಾನ ಮಾಡುವ ಕೃತ್ಯಗಳಿಗೆ ಕಾನೂನು ಕ್ರಮ ಕೈಗೊಳ್ಳುವ ಉದ್ದೇಶ ಹೊಂದಲಾಗಿದೆ.

ಇದರ ಜೊತೆಗೆ, ಸಾರ್ವಜನಿಕ ಪರೀಕ್ಷೆಗಳಲ್ಲಿ ಅಕ್ರಮ ವಿಧಾನಗಳು ಮತ್ತು ಪ್ರಶ್ನೆಪತ್ರಿಕೆ ಸೋರಿಕೆ ತಡೆಯಲು ತರಲಾದ ತಿದ್ದುಪಡಿ ಮಸೂದೆ ಕೂಡ ಪ್ರಮುಖವಾಗಿದೆ. ಪರೀಕ್ಷಾ ಅಕ್ರಮಗಳಲ್ಲಿ ಭಾಗಿಯಾಗು ವವರಿಗೆ ಕಠಿಣ ಶಿಕ್ಷೆ ಹಾಗೂ ಹೆಚ್ಚಿನ ದಂಡ ವಿಧಿಸುವ ಪ್ರಸ್ತಾವನೆಗಳನ್ನು ಒಳಗೊಂಡಿದೆ.ಮಳೆಗಾಲದ ಅಧಿವೇಶನ ಮುಕ್ತಾಯದ ಹಂತಕ್ಕೆ ಬರುತ್ತಿರುವ ಸಂದರ್ಭದಲ್ಲಿ, ಉಳಿದ ದಿನಗಳಲ್ಲಿ ಅರ್ಥಪೂರ್ಣ ಚರ್ಚೆಗಳು ನಡೆಯುತ್ತವೆಯೇ ಅಥವಾ ಮತ್ತೆ ಗದ್ದಲಕ್ಕೆ ಸೀಮಿತವಾಗುತ್ತದೆಯೇ ಎಂಬುದು ಗಮನ ಸೆಳೆದಿದೆ.

ಬೂಮಾನಂದ ಹದ್ದಿನಾಳ ಹತ್ಯೆ ಖಂಡನೀಯ

ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು: ಎಂ. ಕೃಷ್ಣಮೂರ್ತಿ

ರಾಯಚೂರು,ಆ.6-

ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ಬಹುಜನ ಸಮಾಜ ಪಕ್ಷದ ಜಿಲ್ಲಾ ಉಸ್ತುವಾರಿಯಾಗಿದ್ದ ಬೂಮಾನಂದ ಹದ್ದಿನಾಳ ಅವರ ಬರ್ಬರ ಹತ್ಯೆಯನ್ನು ಬಹುಜನ ಸಮಾಜ ಪಕ್ಷ ತೀವ್ರವಾಗಿ ಖಂಡಿಸುತ್ತದೆ ಎಂದು ಪಕ್ಷದ ರಾಜ್ಯಾಧ್ಯಕ್ಷ ಎಂ. ಕೃಷ್ಣಮೂರ್ತಿ ಹೇಳಿದರು.

ನಗರದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬೂಮಾನಂದ ಹತ್ಯೆ ಪ್ರಕರಣದ ಆರೋಪಿಗಳನ್ನು ಶೀಘ್ರ ಬಂಧಿಸಿ ಕಾನೂನು ಪ್ರಕಾರ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಎಂದು ಆಗ್ರಹಿಸಿದರು.



ರಾಯಚೂರು ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ನಡೆದಿರುವ ಪ್ರಸಾದ್ ಮದಲಾಪೂರು ಹಾಗೂ ಬೂಮಾನಂದ ಹದ್ದಿನಾಳ ಅವರ ಹತ್ಯೆಗಳು ಜಿಲ್ಲೆಯಲ್ಲಿನ ಸಾಮಾಜಿಕ ಸಾಮರಸ್ಯಕ್ಕೆ ಧಕ್ಕೆ ತಂದಿವೆ. ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಜಂಟಿಯಾಗಿ ಸಾಮರಸ್ಯ ಸಭೆಗಳು, ಕಾನೂನು ಅರಿವು ಕಾರ್ಯಕ್ರಮಗಳು ಮತ್ತು ಶಾಂತಿ ಕಾಪಾಡುವ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಬೂಮಾನಂದ ಅವರ ಮೇಲೆ ಈ ಹಿಂದೆ ಹಲ್ಲೆ ನಡೆದಿದ್ದು, ಜೀವ ಬೆದರಿಕೆ ನೀಡಲಾಗಿದ್ದರೂ ಸ್ಥಳೀಯ ಪೊಲೀಸ್ ಠಾಣೆ ಸೂಕ್ತ ರಕ್ಷಣೆ ಹಾಗೂ ಕಾನೂನು ಕ್ರಮ ಕೈಗೊಳ್ಳದಿರುವುದೇ ಈ ದುರ್ಘಟನೆಗೆ ಕಾರಣವಾಗಿದೆ ಎಂದು ಆರೋಪಿಸಿದ ಅವರು, ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯ ವಿರುದ್ಧ ತನಿಖೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ದೀರ್ಘಕಾಲದಿಂದ ಗಟ್ಟೂರು ಪೊಲೀಸ್ ಠಾಣೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯನ್ನು ಕೂಡಲೇ ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿದರು.

ಹತ್ಯೆಗೀಡಾದ ಬೂಮಾನಂದ ಅವರ ಕುಟುಂಬಕ್ಕೆ ₹50 ಲಕ್ಷ ಪರಿಹಾರ ನೀಡಬೇಕು. ಅವರ ಕುಟುಂಬಕ್ಕೆ 5 ಎಕರೆ ಜಮೀನು ಮಂಜೂರು ಮಾಡಬೇಕು ಹಾಗೂ ಅವರ ಪತ್ನಿಗೆ ಸರ್ಕಾರಿ ಉದ್ಯೋಗ ನೀಡಬೇಕು ಎಂದು ಆಗ್ರಹಿಸಿದರು.

ಜಿಲ್ಲೆಯಲ್ಲಿ ಹಲ್ಲೆ ಮತ್ತು ಕೊಲೆಗಳಿಗೆ ಕುಮ್ಮಕ್ಕು ನೀಡುವ ಸಮಾಜಘಾತುಕ ಶಕ್ತಿಗಳನ್ನು ಪತ್ತೆಹಚ್ಚಿ ಜಿಲ್ಲೆಯಿಂದ ಗಡಿಪಾರು ಮಾಡಬೇಕು. ಬೂಮಾನಂದ ಹತ್ಯೆ

3 ನೇ ಪುಟಕ್ಕೆ

ಆ.8-9ರಂದು ರಾಯಚೂರಿನಲ್ಲಿ ಮೊದಲ ಬ್ಯಾಡ್ಮಿಂಟನ್ ಪ್ರೀಮಿಯರ್ ಲೀಗ್



ರಾಯಚೂರು,ಆ.6-

ಜಿಲ್ಲೆಯ ಬ್ಯಾಡ್ಮಿಂಟನ್ ಕ್ರೀಡಾ ಇತಿಹಾಸದಲ್ಲೇ ಮೊದಲ ಬಾರಿಗೆ ರಾಯಚೂರು ಜಿಲ್ಲಾ ಬ್ಯಾಡ್ಮಿಂಟನ್ ಪ್ರೀಮಿಯರ್ ಲೀಗ್ (ಸೀಸನ್-1) ಅನ್ನು ಆಗಸ್ಟ್ 8 ಮತ್ತು 9ರಂದು ನಗರದ ಮಹಾತ್ಮ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ರಾಯಚೂರು ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿಯೇಷನ್ ಅಧ್ಯಕ್ಷ ಬೆಲ್ಲಂ ಕಿರಣ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಯಚೂರು ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿಯೇಷನ್, ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಷನ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಐಪಿಎಲ್ ಮಾದರಿಯಲ್ಲಿ ಈ ಲೀಗ್ ಆಯೋಜಿಸಲಾಗುತ್ತಿದ್ದು, ಜಿಲ್ಲೆಯ ಬ್ಯಾಡ್ಮಿಂಟನ್ ಕ್ರೀಡೆಗೆ ಇದು ಹೊಸ ಮೈಲಿಗಲ್ಲಾಗಲಿದೆ ಎಂದು ಹೇಳಿದರು.

16ರಿಂದ 76 ವರ್ಷ ವಯಸ್ಸಿನ ಆಟಗಾರರು ಲೀಗ್‌ನಲ್ಲಿ ಭಾಗವಹಿಸುತ್ತಿದ್ದು, ತುಂಗಭದ್ರಾ, ತುಂಗಕೃಷ್ಣ, ವಿಕ್ಟರಿ ಬ್ಯಾಡ್ಮಿಂಟನ್ ಅಕಾಡೆಮಿ ಹಾಗೂ

3 ನೇ ಪುಟಕ್ಕೆ

ಪಿಒಪಿಗೆ ಗೇಟ್ ಪಾಸ್, ಮಣ್ಣಿನ ಗಣೇಶನಿಗಷ್ಟೇ ಅವಕಾಶ, ಗ್ರಾಮ ಪಂಚಾಯಿತಿಗಳಿಗೆ ಸರ್ಕಾರ ಖಡಕ್ ಸೂಚನೆ

ಬೆಂಗಳೂರು,ಆ.06-

ಮಹತ್ವದ ಬೆಳವಣಿಗೆಯಲ್ಲಿ ಗಣೇಶ ಹಬ್ಬ ಹತ್ತಿರವಾಗುತ್ತಿರುವಂತೆಯೇ ರಾಜ್ಯ ಸರ್ಕಾರ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಮಣ್ಣಿನ ಗಣೇಶ ಮೂರ್ತಿಗಳಿಗಷ್ಟೇ ಅವಕಾಶ ನೀಡುವ ಕುರಿತು ಖಡಕ್ ಆದೇಶ ಹೊರಡಿಸಿದೆ.

ಹೌದು.. ಕರ್ನಾಟಕದಲ್ಲಿ ಗಣೇಶೋತ್ಸವದ ವೇಳೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕವಾಗಿ ಪ್ರತಿಷ್ಠಾಪನೆ ಮತ್ತು ವಿಸರ್ಜನೆಗೆ ಪರಿಸರ ಸ್ನೇಹಿ, ಬಣ್ಣ ಹಚ್ಚದ ಮಣ್ಣಿನ ಗಣೇಶ ಮೂರ್ತಿಗಳಿಗೆ ಮಾತ್ರ ಅವಕಾಶ ನೀಡುವಂತೆ ಅಧಿಕಾರಿಗಳಿಗೆ ಸಚಿವ



ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.

ಸೆಪ್ಟೆಂಬರ್ 14ರಂದು ಗಣೇಶ ಹಬ್ಬ ನಡೆಯಲಿರುವ ಹಿನ್ನೆಲೆಯಲ್ಲಿ ಸಚಿವರು ಈ ಸೂಚನೆ ನೀಡಿದ್ದು, ಇಲಾಖೆಯ ಕಾರ್ಯದರ್ಶಿಗೆ ಬರೆದ ಪತ್ರದಲ್ಲಿ, ರಾಸಾಯನಿಕ ಬಣ್ಣ ಬಳಿದಿರುವ ನಿಷೇಧಿತ ಪ್ಲಾಸ್ಟರ್ ಆಫ್ ಪ್ಯಾರಿಸ್ ಮೂರ್ತಿಗಳ ವಿಸರ್ಜನೆಗೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು ಎಂದು ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ಜಲಮೂಲಗಳು ಹಾಗೂ ಪರಿಸರ ಸಂರಕ್ಷಣೆಗಾಗಿ ಜನರು ಮಣ್ಣಿನ ಮೂರ್ತಿಗಳನ್ನೇ ಪೂಜಿಸುವಂತೆ ಉತ್ತೇಜಿಸಬೇಕು ಎಂದು ಅವರು ಕರೆ ನೀಡಿದ್ದಾರೆ. ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಪರಿಸರ ಸ್ನೇಹಿ ಮಣ್ಣಿನ ಗೌರಿ ಮತ್ತು ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಹಾಗೂ ವಿಸರ್ಜನೆಗೆ ಮಾತ್ರ ಅವಕಾಶ ನೀಡಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಸೂಚಿಸಿದ್ದಾರೆ.


ಪಿಒಪಿ ಮೂರ್ತಿಗಳಿಗಿಲ್ಲ ಅವಕಾಶ

ಹಬ್ಬಕ್ಕೂ ಮುನ್ನವೇ ಪಿಒಪಿ ಗಣೇಶ ಮೂರ್ತಿಗಳ ತಯಾರಿಕೆ, ದಾಸ್ತಾನು, ಸಾಗಣೆ ಹಾಗೂ ಮಾರಾಟವನ್ನು ತಡೆಯಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಖಂಡ್ರೆ ನಿರ್ದೇಶನ ನೀಡಿದ್ದಾರೆ. ಹಬ್ಬದ ಸಂದರ್ಭದಲ್ಲಿ ಜನರ ಧಾರ್ಮಿಕ ಭಾವನೆಗಳಿಗೆ ಯಾವುದೇ ರೀತಿಯ ಧಕ್ಕೆಯಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸಹಕಾರ ಪಡೆದು, ಪಂಚಾಯಿತಿ ಮಟ್ಟದಲ್ಲಿ ಪಿಒಪಿ ಮೂರ್ತಿಗಳಿಂದಾಗುವ ಹಾನಿಯ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ನಡೆಸುವಂತೆಯೂ ಅವರು ಸೂಚಿಸಿದ್ದಾರೆ.

3 ನೇ ಪುಟಕ್ಕೆ

ರಾಯಚೂರು ನಗರದ ವಿವಿಧ ವಸತಿ ನಿಲಯಗಳಿಗೆ ಜಿಲ್ಲಾಧಿಕಾರಿಗ ಆಕಸ್ಮಿಕ ಭೇಟಿ ಮತ್ತು ಪರಿಶೀಲನೆ



ರಾಯಚೂರು,ಆ.6-

ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಬುಧವಾರ ರಾತ್ರಿ ರಾಯಚೂರು ನಗರದ ಹೊರ ವಲಯದಲ್ಲಿರುವ ಮೋರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಡಿ. ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಆಕಸ್ಮಿಕ ಬೇಟಿ ನೀಡಿ ಪರಿಶೀಲನೆ ನಡೆಸಿ ವಿದ್ಯಾರ್ಥಿಗಳಿಗೆ ವಸತಿ ನಿಲಯಗಳಲ್ಲಿ ಸರಿಯಾದ ರೀತಿಯಲ್ಲಿ ಊಟ ಮತ್ತು ಇತರೆ ಸೌಲಭ್ಯಗಳನ್ನು ಸಿಗುತ್ತಿವೆಯೆ ಎಂಬುದರ ಕುರಿತು ಪರಿಶೀಲಿಸಿದರು.

ವಸತಿ ನಿಲಯದಲ್ಲಿ ಮೆನುವಿನ ಪ್ರಕಾರ ಮಕ್ಕಳಿಗೆ ಆಹಾರ ನೀಡಲಾ

3 ನೇ ಪುಟಕ್ಕೆ

ದಲಿತ ಯುವಕನ ಮೇಲೆ ಮರಣಾಂತಿಕ ಹತ್ಯೆ



ಸುರಪುರ,ಆ.6-

ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಹದ್ದಿನಾಳ ಎಂಬ ಗ್ರಾಮದ ದಲಿತ(ಮಾದಿಗ) ಸಮುದಾಯಕ್ಕೆಸೇರಿದ ಯುವಕ ಭೂಮಾನಂದನ ತಂದೆ ಹನಮಂತ ವಯಸ್ಸು 37 ಈತನ ಮೇಲೆ ಮರಣಾತಿಕ ಹಲ್ಯೆ ಮಾಡಿ ಸಾರ್ವಜನಿಕ ಸ್ಥಳದಲ್ಲಿ ಲಾಂಗ್ . ಮಚ್ಚುನ್ನು ಇತರ ಸಾಮಗ್ರಿಗಳು ತೆಗೆದುಕೊಂಡು ಭೀಕರವಾಗಿ ಕೊಲೆ ಮಾಡಿದ ಆರೋಪಿಗಳನ್ನು ಈ ಕೂಡಲೇ ಗಡಿ ಪಾರು ಮಾಡಿ ಬಂದಿಸಿ ಮತ್ತು ಕುಟುಂಬಕ್ಕೆ 50 ಲಕ್ಷ ಪರಿಹಾರ ನೀಡಿ. ಇವರ ಕುಟುಂಬಕ್ಕೆ ರಕ್ಷಣೆ ಒದಗಿಸಿ ಅವರ ಕುಟುಂಬಕ್ಕೆ ಸರಕಾರಿ ನೌಕರಿ ಕೊಡಿಸಬೇಕು ಮತ್ತು ಕೊಲೆಗೈದ ಆರೋಪಿತರನ್ನು ಗಲ್ಲು ಶಿಕ್ಷೆಗೆ ಗುರಿಪಡಿಸುವಂತೆ ಒತ್ತಾಯಿಸಿ ಸುರಪುರ ತಾಲೂಕು ಘಟಕ ಮಾದಿಗ ದಂಡೋರ ತಾಲೂಕು ಅಧ್ಯಕ್ಷ

3 ನೇ ಪುಟಕ್ಕೆ

ಹೊಸ ಕಾಲೇಜು ಕಟ್ಟಡಕ್ಕೆ ಆಗ್ರಹಿಸಿ ವಿದ್ಯಾರ್ಥಿಗಳ ಪ್ರತಿಭಟನೆ

30 ವರ್ಷದ ಹಳೆಯ ಕಟ್ಟಡದಲ್ಲಿ 450 ವಿದ್ಯಾರ್ಥಿಗಳ ವ್ಯಾಸಂಗ; ಅವಘಡಕ್ಕೂ ಮುನ್ನ ಸುರಕ್ಷಿತ ಕಟ್ಟಡ ನಿರ್ಮಾಣಕ್ಕೆ ಸರ್ಕಾರಕ್ಕೆ ಮನವಿ

ರಾಯಚೂರು,ಆ.6-

ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಕಟ್ಟಡದಲ್ಲಿ ಜೀವಭಯದ ನಡುವೆ ವಿದ್ಯಾಭ್ಯಾಸ ನಡೆಸುತ್ತಿರುವ ವಿದ್ಯಾರ್ಥಿಗಳು ಗುರುವಾರ ತರಗತಿಗಳನ್ನು ಬಹಿಷ್ಕರಿಸಿ ಕಾಲೇಜಿನಿಂದ ಹೊರಬಂದು ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು. ಕೂಡಲೇ ಹೊಸ ಕಾಲೇಜು ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ಸರ್ಕಾರವನ್ನು ಆಗ್ರಹಿಸಿದರು.

ವಿದ್ಯಾರ್ಥಿಗಳು ಶಿಥಿಲಗೊಂಡ ಕಾಲೇಜು ಕಟ್ಟಡದಲ್ಲಿ ಯಾವುದೇ ಕ್ಷಣದಲ್ಲಿ ಅವಘಡ ಸಂಭವಿಸುವ ಭೀತಿ ಎದುರಾಗಿರುವ ಹಿನ್ನೆಲೆಯಲ್ಲಿ



ಜೀವಭಯದಿಂದ ಕಾಲೇಜಿನಿಂದ ಹೊರಬಂದು ಪ್ರತಿಭಟನೆ ನಡೆಸಿದರು. ಬಳಿಕ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿ, ಹಲವು ಬಾರಿ ಮನವಿ ಸಲ್ಲಿಸಿದ್ದರೂ ಇದುವರೆಗೆ ಯಾವುದೇ ಕ್ರಮ ಕೈಗೊಳ್ಳದಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಸುಮಾರು 30 ವರ್ಷಗಳಷ್ಟು ಹಳೆಯದಾದ ಕಟ್ಟಡದಲ್ಲೇ ಪಾಠ ಕೇಳಬೇಕಾದ ಅನಿವಾರ್ಯತೆ ಎದುರಾಗಿದೆ ಎಂದು ಅವರು ದೂರಿದರು. ವಿದ್ಯಾರ್ಥಿಗಳ ಪ್ರಕಾರ, ಕಾಲೇಜಿನ ಕಟ್ಟಡ ಸಂಪೂರ್ಣ ಶಿಥಿಲಗೊಂಡಿದ್ದು, ಮಳೆಗಾಲದಲ್ಲಿ ಮೇಲ್ಛಾವಣಿ ಸೋರಿಕೆಯಾಗುತ್ತಿದೆ. ಗೋಡೆಗಳಲ್ಲಿ ಬಿರುಕುಗಳು ಕಾಣಿಸಿಕೊಂಡಿದ್ದು, ಯಾವುದೇ ಕ್ಷಣದಲ್ಲಿ ಕಟ್ಟಡ ಕುಸಿಯುವ ಭೀತಿ ಎದುರಾಗಿದೆ. ಕಲಾ, ವಾಣಿಜ್ಯ ಹಾಗೂ ವಿಜ್ಞಾನ ವಿಭಾಗಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸುಮಾರು 450 ವಿದ್ಯಾರ್ಥಿಗಳು ಜೀವಭಯದ ನಡುವೆಯೇ ಪ್ರತಿದಿನ ತರಗತಿಗಳಿಗೆ ಹಾಜರಾಗುವ ಪರಿಸ್ಥಿತಿ ನಿರ್ಮಾಣವಾಗಿದೆ.

ಮನವಿಯಲ್ಲಿ, ಕಾಲೇಜಿನಲ್ಲಿ ಪೂರ್ಣ ಪ್ರಮಾಣದ

3 ನೇ ಪುಟಕ್ಕೆ

ಜಿಲ್ಲೆಯ ಯಾವುದೇ ರೈತರು ಬೆಳೆ ಸಾಲ ಸೌಲಭ್ಯದಿಂದ ವಂಚಿತರಾಗದತೆ ಕ್ರಮ ವಹಿಸಿ: ಡಾ.ಸುರೇಶ ಬಿ.ಇಟ್ನಾಳ



ಕೊಪ್ಪಳ ಆ.06-

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಾದ್ಯಂತ ಸಮರ್ಪಕ ಮಳೆಯಾಗದ ಕಾರಣ ಅನೇಕ ಪ್ರದೇಶಗಳಲ್ಲಿ ಬೆಳೆಗಳ ಬೆಳವಣಿಗೆ ಕುಂಠಿತಗೊಂಡಿದ್ದು, ಬೆಳೆ ಇಳುವರಿ ಗಣನೀಯ ಪ್ರಮಾಣದಲ್ಲಿ ಕುಸಿಯುವ ಸಾಧ್ಯತೆ ಇದೆ. ಇದರಿಂದ ರೈತರು ನಿರೀಕ್ಷಿತ ಆರ್ಥಿಕ ಲಾಭವನ್ನು ಪಡೆಯಲು ಸಾಧ್ಯವಾಗದೇ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಹಿನ್ನೆಲೆಯಲ್ಲಿ ರೈತರಿಗೆ ಅಗತ್ಯ ಆರ್ಥಿಕ ನೆರವು ಒದಗಿಸುವ ಉದ್ದೇಶದಿಂದ ಕಿಸಾನ್ ಕ್ರೆಡಿಟ್ ಕಾರ್ಡ್ ಯೋಜನೆಯಡಿ ಯಾವುದೇ ರೈತರು ಬೆಳೆ ಸಾಲ ಸೌಲಭ್ಯದಿಂದ ವಮುಚಿತರಾಗದಂತೆ ಕ್ರಮ ವಹಿಸಿ ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳವಾರದದು ಜಿಲ್ಲಾ ಪಂಚಾಯತಿಯ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಆಯೋಜಿಸಿದ್ದ ಬೆಳೆ ಸಾಲದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಯಾವುದೇ ಅರ್ಹ ರೈತರು ಬೆಳೆ ಸಾಲದ ಸೌಲಭ್ಯದಿಂದ ವಂಚಿತರಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಇದುವರೆಗೂ ಕಿಸಾನ್ ಕ್ರೆಡಿಟ್ ಕಾರ್ಡ್ ಯೋಜನೆಯಡಿ ಸಾಲ ಪಡೆಯದಿರುವ ರೈತರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ, ಕೃಷಿ ಮತ್ತು ಸಂಬಂಧಿತ ಇಲಾಖೆಗಳ ಅಧಿಕಾರಿಗಳು ಬ್ಯಾಂಕುಗಳೊದಿಗೆ ಸಮನ್ವಯ ಸಾಧಿಸಿ ವಿಶೇಷ ಕಿಸಾನ್ ಕ್ರೆಡಿಟ್ ಕಾರ್ಡ್ ನೋಂದಣಿ ಹಾಗೂ ಸಾಲ ಮಂಜೂರಾತಿ ಶಿಬಿರಗಳನ್ನು ಗ್ರಾಮ ಪಂಚಾಯಿತಿ ಹಾಗೂ ರೈತ ಸಂಪರ್ಕ ಕೇಂದ್ರಗಳ ಮಟ್ಟದಲ್ಲಿ ಆಯೋಜಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅರ್ಹ ರೈತರಿಂದ ಅಗತ್ಯ ದಾಖಲೆಗಳನ್ನು ಸ್ಥಳದಲ್ಲಿಯೇ ಸ್ವೀಕರಿಸಿ, ಅರ್ಜಿಗಳ ಪರಿಶೀಲನೆ ಹಾಗೂ ಅನುಮೋದನೆ ಪ್ರಕ್ರಿಯೆಯನ್ನು ತ್ವರಿತಗೊಳಿಸುವ ಮೂಲಕ ಸಾಧ್ಯವಾದಷ್ಟು ಕಡಿಮೆ ಅವಧಿಯಲ್ಲಿ ಬೆಳೆ ಸಾಲವನ್ನು ಮಂಜೂರು ಮಾಡಿ ವಿತರಿಸಬೇಕು ಎಂದು ಬ್ಯಾಂಕುಗಳ ವ್ಯವಸ್ಥಾಪಕರಿಗೆ ಸೂಚಿಸಿದರು. ರೈತರಿಗೆ ಕೆಸಿಸಿ ಯೋಜನೆಯ ಪ್ರಯೋಜನಗಳು, ಸಾಲದ ಮಿತಿಗಳು ಹಾಗೂ ಮರುಪಾವತಿ ಸೌಲಭ್ಯಗಳ ಕುರಿತು ವ್ಯಾಪಕವಾಗಿ ಅರಿವು ಮೂಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬೆಳೆಗಾರ ರೈತರಷ್ಟೇ ಅಲ್ಲದೆ ಪಶುಪಾಲನೆ, ಹೈನುಗಾರಿಕೆ, ಕುರಿ-ಮೇಕೆ ಸಾಕಾಣಿಕೆ, ಕೋಳಿ ಸಾಕಾಣಿಕೆ ಹಾಗೂ ಮೀನುಗಾರಿಕೆ ಚಟುವಟಿಕೆಗಳಲ್ಲಿ ತೊಡಗಿರುವ ಅರ್ಹ ರೈತರಿಗೆ ಸಹ ಕೆಸಿಸಿ ಯೋಜನೆಯಡಿ ಸಾಲ ಸೌಲಭ್ಯವನ್ನು ಆದ್ಯತೆಯ ಮೇರೆಗೆ ಮಂಜೂರು ಮಾಡಿ ಆರ್ಥಿಕ ನೆರವು ಒದಗಿಸಬೇಕು. ವಿವಿಧ ಇಲಾಖೆಗಳು ಹಾಗೂ ಬ್ಯಾಂಕುಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಿ, ಸರ್ಕಾರದ ಉದ್ದೇಶದಂತೆ ರೈತರಿಗೆ ಸಮಯೋಚಿತವಾಗಿ ಸಾಲ ಸೌಲಭ್ಯವನ್ನು ತಲುಪಿಸುವ ಮೂಲಕ ಅವರ ಕೃಷಿ ಹಾಗೂ ಕೃಷಿ-ಸಂಬಂಧಿತ ಚಟುವಟಿಕೆಗಳಿಗೆ ಅಗತ್ಯ ಆರ್ಥಿಕ ಬೆಂಬಲವನ್ನು ಒದಗಿಸಬೇಕು ಎಂದು ಸಭೆಯಲ್ಲಿ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕರಾದ ಜೆ.ಡಿ ಕೃಷ್ಣಮೂರ್ತಿ, ಪಶುಪಾಲನಾ ಸಹಕಾರಿ ಬ್ಯಾಂಕುಗಳ ವ್ಯವಸ್ಥಾಪಕರು ಭಾಗವಹಿಸಿದ್ದರು.

ತ್ಯಾಜ್ಯ ವಿಲೇವಾರಿಗೆ ಸೂಕ್ತ ಕ್ರಮ ಕೈಗೊಳ್ಳಿ : ಸಚಿವ ಯತೀಂದ್ರ ಸಿದ್ದರಾಮಯ್ಯ

ಬೀದರ್ ,ಆ.06-

ಜಿಲ್ಲೆಯಲ್ಲಿ ಹಸಿತ್ಯಾಜ್ಯ ಸಂಸ್ಕರಣೆ ಘಟಕ ಕಾರ್ಯಾಚರಣೆಯಲ್ಲಿದ್ದು, ಅದರಂತೆ ಶೀಘ್ರವಾಗಿ ಒಣ ತ್ಯಾಜ್ಯ ಸಂಸ್ಕರಣಾ ಘಟಕವನ್ನು ಸ್ಥಾಪಿಸಿ ಉತ್ಪಾದನೆಯಾಗುವ ತ್ಯಾಜ್ಯ ವಿಲೇವಾರಿಗಾಗಿ ಸೂಕ್ತ ಕ್ರಮ ವಹಿಸುವಂತೆ ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅವರು ಹೇಳಿದರು. ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಮಹಾನಗರ ಪಾಲಿಕೆ ಹಾಗೂ ನಗರಾಭಿವೃದ್ಧಿ ವತಿಯಿಂದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಕಸ ವಿಲೇವಾರಿಗಾಗಿ ಪ್ರತಿ ಮನೆ, ಮನೆಗೆ ಭೇಟಿ ನೀಡಿ ಒಣತ್ಯಾಜ್ಯ ಹಾಗೂ ಹಸಿ ತ್ಯಾಜ್ಯಯನ್ನು ಸಂಗ್ರಹಿಸಬೇಕು. ಖಾಲಿ ಇರುವ ಬಡಾವಣೆಗಳಲ್ಲಿ ಕಸ ಎಸೆಯುವವರ ವಿರುದ್ಧ ಸೂಕ್ತ ಕ್ರಮ ವಹಿಸಿ ದಂಡ ಹಾಕಬೇಕು. ನಗರದಲ್ಲಿ ಬೇಕಾ ಬಿಟ್ಟಿ ಪ್ರದರ್ಶನ ಘಟಕಗಳನ್ನು ಹಾಕಲಾಗುತ್ತಿದ್ದು, ಅದರಿಂದ ಬರುವಂತ ತೆರಿಗೆಯನ್ನು ಸಮರ್ಪಕವಾಗಿ ತೆಗೆದುಕೊಳ್ಳುತ್ತಿಲ್ಲ. ಅಂತಹ ಫಲಕಗಳನ್ನು ಗುರುತಿಸಿ ದಂಡವನ್ನು ಹಾಕಬೇಕು. ಇನ್ನೂಮ್ಮೆ ಈ ರೀತಿ ಆಗದಂತೆ ಕ್ರಮವಹಿಸಬೇಕು ಎಂದು ಅವರು ಎಚ್ಚರಿಸಿದರು.

ನಗರವನ್ನು ಸುಂದರ ಹಾಗೂ ಸ್ವಚ್ಛ ನಗರವನ್ನಾಗಿ ಪರಿವರ್ತಿಸಲು ಈಗಾಗಲೇ 200 ಕೋಟಿ ರೂ.ಗಳ ಅನುದಾನ ಘೋಷಿಸಿದ್ದು, ಅನುದಾನ ಯೋಜನೆಯನ್ನು ರೂಪಿಸಬೇಕು.



ಹೆಚ್ಚುವರಿ ಅನುದಾನ ಅವಶ್ಯಕತೆ ಇದ್ದಲ್ಲಿ ಬಿಡುಗಡೆಗೆ ಕ್ರಮ ವಹಿಸಲಾಗುವುದು ಎಂದು ಅವರು ಹೇಳಿದರು.

ಬಹುತೇಕ ಶೌಚಾಲಯದಲ್ಲಿ ಶುಚಿತ್ವ ಕಾಪಾಡುತ್ತಿಲ್ಲ ಎಂಬ ದೂರುಗಳು ಬರುತ್ತಿವೆ. ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಅಧಿಕಾರಿಗಳು ಪರಿಶೀಲಿಸಿ ಅಂತಹ ಗುತ್ತಿಗೆದಾರರಿಗೆ ನೋಟಿಸ್ ಜಾರಿಗೊಳಿಸುವ ಮೂಲಕ ಅವರ ಗುತ್ತಿಗೆಯನ್ನು ರದ್ದು ಪಡಿಸಬೇಕು ಎಂದು ಅವರು ಸೂಚಿಸಿದರು.

ನಗರದ ಪ್ರತಿ ಮನೆಗಳಿಗೂ ಒಳ ಚರಂಡಿ ವ್ಯವಸ್ಥೆಯನ್ನು ಶೀಘ್ರವಾಗಿ ಕಲ್ಪಿಸಿ, ಎಲ್ಲ ಮನೆಗಳಲ್ಲಿ ಈ ಸೌಲಭ್ಯವಿರಬೇಕು. ಗುಣಮಟ್ಟದ ಕಾಮಗಾರಿಗೆ ಹೆಚ್ಚು ಒತ್ತು ನೀಡಬೇಕು. ಹಾಗೆಯೇ ಒಳ ಚರಂಡಿಗಳ ವ್ಯವಸ್ಥೆಯುಗಳನ್ನು ಉನ್ನತೀಕರಿಸಲು ಕ್ರಮ ವಹಿಸಬೇಕು ಎಂದು ಅವರು ಹೇಳಿದರು.

ಜಿಲ್ಲೆಯಲ್ಲಿರುವ ಪ್ರತಿಯೊಂದು ಮನೆಗಳಿಗೆ ಜಿಪಿಎಸ್ ಕಲ್ಪಿಸಿ ಮ್ಯಾಪಿಂಗ್ ಮಾಡುವ ಕೆಲಸಗಳು ವೇಗವಾಗಬೇಕು. ಅವರೊಂದಿಗೆ ತೆರಿಗೆ ಸಂಗ್ರಹ ಕೂಡ ಹೆಚ್ಚಿಸಬೇಕು. ಪ್ರತಿಯೊಂದು ಅಂಗಡಿಗಳಲ್ಲಿ ಟ್ರೇಡ್ ಲೈಸನ್ಸ್ ಹೊಂದಿರಬೇಕು. ಟ್ರೇಡ್ ಲೈಸನ್ಸ್ ಹೊಂದಿರದ ಅಂಗಡಿಗಳಿಗೆ ಅನುಮತಿ ನೀಡಬಾರದು. ಈ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತಾಗಬೇಕು ಎಂದರು. ಈ ಸಭೆಯಲ್ಲಿ ಶಾಸಕ ರಹೀಂ ಖಾನ್, ಮಹಾನಗರ ಪಾಲಿಕೆಯ ಆಯುಕ್ತ ಮುಕುಲ್ ಜೈನ್, ಮಹಾನಗರ ಪಾಲಿಕೆ, ಜಿಲ್ಲಾ ಮಟ್ಟದ ಅಧಿಕಾರಿಗಳು, ಪುರಸಭೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಬಸರಕೋಡು ಉಪಕೇಂದ್ರಕ್ಕೆ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಆರ್. ಅಬ್ದುಲ್ಲಾ ಭೇಟಿ

ಸಾಂಕ್ರಾಮಿಕ ರೋಗ ತಡೆಗೆ ಮುಂಜಾಗ್ರತಾ ಕ್ರಮಗಳ ಪರಿಶೀಲನೆ

ಬಳ್ಳಾರಿ,ಆ.06-

ತಾಲೂಕಿನ ಬಸರಕೋಡು ಗ್ರಾಮದಲ್ಲಿ ಇತ್ತೀಚೆಗೆ ಕಂಡುಬದಿರುವ ಜ್ವರ ಪ್ರಕರಣಗಳ ಹಿನ್ನೆಲೆಯಲ್ಲಿ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಆರ್. ಅಬ್ದುಲ್ಲಾ ಅವರು ಬಸರಕೋಡು ಉಪಕೇಂದ್ರ ಹಾಗೂ ಗ್ರಾಮದ ವಿವಿಧ ಬಡಾವಣೆಗಳಿಗೆ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಭೇಟಿಯ ವೇಳೆ ಜ್ವರದಿಂದ ಬಳಲುತ್ತಿರುವ ರೋಗಿಗಳ ಮನೆಗಳಿಗೆ ತೆರಳಿ ಆರೋಗ್ಯ ವಿಚಾರಿಸಿದ ಅವರು, ಗ್ರಾಮಸ್ಥರು ವಹಿಸಬೇಕಾದ ನೈರ್ಮಲ್ಯ ಹಾಗೂ ಸ್ವಚ್ಛತಾ ಕ್ರಮಗಳ ಕುರಿತು ಅರಿವು ಮೂಡಿಸಿದರು.

ಒಳಾಂಗಣ ಧೂಮೀಕರಣ:

ಇಡೀ ಗ್ರಾಮದಲ್ಲಿ ತಕ್ಷಣವೇ ಒಳಾಂಗಣ ಧೂಮೀಕರಣ ಕಾರ್ಯ ಕೈಗೊಳ್ಳಬೇಕು ಎಂದು ಆರೋಗ್ಯ ಸಿಬ್ಬಂದಿಗೆ ಸೂಚಿಸಿದ ಅವರು, ಧೂಮೀಕರಣದ ಸಮಯದಲ್ಲಿ ಸಾರ್ವಜನಿಕರು ಸುರಕ್ಷಿತವಾಗಿ ಮನೆಯಿಂದ ಹೊರಗಿರಬೇಕು ಎಂದು ತಿಳಿಸಿದರು.

ಡ್ರೈ ಡೇ ಮತ್ತು ಕುಡಿಯುವ ನೀರು:

ಧೂಮೀಕರಣದ ನಂತರ ಡ್ರೈ ಡೇ' (ಒಣ ದಿನ) ಅನುಸರಿಸಿ, ಬಳಿಕವಷ್ಟೇ ಸಾರ್ವಜನಿಕರಿಗೆ ನೀರು ಸರಬರಾಜು ಮಾಡಬೇಕು. ನೀರನ್ನು ಕಡ್ಡಾಯವಾಗಿ ಕಾಯಿಸಿ, ಆರಿಸಿ ಕುಡಿಯುವಂತೆ ಮತ್ತು ಈ ಕುರಿತು ಗ್ರಾಮದಲ್ಲಿ ಡಂಗುರ ಸಾರಿಸಿ ಅರಿವು ಮೂಡಿಸುವಂತೆ ನಿರ್ದೇಶ ನೀಡಿದರು.

ಸಮುದಾಯ ಸಭೆ ಮತ್ತು ಸೊಳ್ಳೆ ನಿಯಂತ್ರಣ: ಗ್ರಾಮಸ್ಥರ ಸಮುದಾಯ ಸಭೆ ನಡೆಸಿ, ಕುಡಿಯುವ ಮತ್ತು ಬಳಕೆಯ ನೀರನ್ನು ಮುಚ್ಚಳದಿಂದ ಅಥವಾ ಶುಭ್ರವಾದ ಬಟ್ಟೆಯಿಂದ ಸೊಳ್ಳೆಗಳು ನುಸುಳದಂತೆ ಮುಚ್ಚಿಡಬೇಕು ಎಂದು ಜಾಗೃತಿ ಮೂಡಿಸಿದರು.



ಆರೋಗ್ಯ ತಪಾಸಣೆ: ಜ್ವರದ ಲಕ್ಷಣಗಳು ಕಂಡುಬದಲ್ಲಿ ಸಾರ್ವಜನಿಕರು ತಕ್ಷಣ ಉಪಕೇಂದ್ರದ ಆರೋಗ್ಯ ಶಿಬಿರದಲ್ಲಿ ವೈದ್ಯರನ್ನು ಭೇಟಿ ಮಾಡಿ ಸೂಕ್ತ ಚಿಕಿತ್ಸೆ ಪಡೆಯುವಂತೆ ಕೋರಿದರು.

ಆರೋಗ್ಯ ಸುರಕ್ಷತೆಗಾಗಿ ಸಲಹೆಗಳು:

ಡೆಂಗ್ಯೂ, ಮಲೇರಿಯಾ ಹಾಗೂ ವೈರಲ್ ಜ್ವರಗಳನ್ನು ತಡೆಗಟ್ಟಲು ಮನೆ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದು, ಸೊಳ್ಳೆ ಪರದೆ ಬಳಸುವುದು, ಉದ್ದನೆಯ ತೋಳಿನ ಬಟ್ಟೆ ಧರಿಸುವುದು, ಕೈಗಳನ್ನು ಸೋಪಿನಿಂದ ತೊಳೆಯುವುದು, ಪೌಷ್ಟಿಕ ಆಹಾರ ಹಾಗೂ ಕುದಿಸಿದ ನೀರು ಸೇವಿಸುವುದು ಅಗತ್ಯ ಎಂದು ವೈದ್ಯಾಧಿಕಾರಿಗಳು ತಿಳಿಸಿದರು.

ಮುಖ್ಯವಾಗಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಮನೆ ಸುತ್ತಮುತ್ತ, ಟೈರ್, ಪ್ಲಾಸ್ಟಿಕ್ ಕಪ್, ಹೂ ಕುಂಡಗಳ ಕೆಳಗೆ ಹಾಗೂ ಏರ್ ಕೂಲರ್‌ಗಳಲ್ಲಿ ನೀರು ನಿಲ್ಲಲು ಬಿಡಬಾರದು. ಸ್ವಚ್ಛ ನೀರಿನಲ್ಲಿ ಡೆಂಗ್ಯೂ ಹರಡುವ ಸೋಂಕಿತ ಸೊಳ್ಳೆಗಳು ಮೊಟ್ಟೆ ಇಡುತ್ತವೆ. ಅವುಗಳ ನಿಯಂತ್ರಣಕ್ಕಾಗಿ ಸೊಳ್ಳೆ ಪರದೆ ಬಳಸಿ, ಮಲಗುವಾಗ ಸೊಳ್ಳೆ ಪರದೆ ಅಥವಾ ಸೊಳ್ಳೆ ನಿವಾರಕಗಳನ್ನು ಬಳಸಬೇಕು ಎಂದು ತಿಳಿಸಿದರು.

ದೇಹವನ್ನು ಪೂರ್ತಿಯಾಗಿ ಮುಚ್ಚುವಂತಹ ಉದ್ದನೆಯ ತೋಳಿನ ಬಟ್ಟೆಗಳನ್ನು ಧರಿಸಬೇಕು. ಹೊರಗಡೆಯಿಂದ ಮನೆಗೆ ಬಂದಾಗ, ಆಹಾರ ಸೇವಿಸುವ ಮೊದಲು ಮತ್ತು ಶೌಚಾಲಯ ಬಳಸಿದ ನಂತರ ಸೋಪಿನಿಂದ ಕನಿಷ್ಠ 20 ಸೆಕೆಂಡುಗಳ ಕಾಲ ಕೈಗಳನ್ನು ಸರಿಯಾಗಿ ತೊಳೆಯಬೇಕು. ಜ್ವರ, ಕೆಮ್ಮು ಅಥವಾ ನೆಗಡಿ ಇರುವವರಿಂದ ಸೂಕ್ತ ಅಂತರ ಕಾಯ್ದುಕೊಳ್ಳುವುದು ಉತ್ತಮ. ಜನಸಂದಣಿ ಇರುವ ಪ್ರದೇಶಗಳಲ್ಲಿ ಮಾಸ್ಕ್ ಧರಿಸುವುದು ಒಳ್ಳೆಯದು ಎಂದರು.

ಅಶುಚಿ ಕೈಗಳಿಂದ ಕಣ್ಣು, ಮೂಗು ಮತ್ತು ಬಾಯಿಯನ್ನು ಮುಟ್ಟುವುದನ್ನು ತಡೆಯಿರಿ. ರಸ್ತೆಬದಿಯ ನೊಣ ಮುಸುರಿದ ಹಾಗೂ ಅಶುಚಿತ್ವದಿಂದ ಕೂಡಿದ ಆಹಾರ ಮತ್ತು ತಣ್ಣನೆಯ ಪಾನೀಯಗಳನ್ನು ಸೇವಿಸಬಾರದು. ಜೀವಸತ್ವ ಸಿ ಇರುವ ಹಣ್ಣುಗಳು (ಕಿತ್ತಳೆ, ನೆಲ್ಲಿಕಾಯಿ), ತರಕಾರಿಗಳು, ಸೊಪ್ಪು ಮತ್ತು ಒಣಹಣ್ಣುಗಳನ್ನು ದಿನನಿತ್ಯದ ಆಹಾರದಲ್ಲಿ ಅಳವಡಿಸಿಕೊಳ್ಳಬೇಕು. ಇದರ ಜೊತೆಗೆ ದಿನಕ್ಕೆ ಕನಿಷ್ಠ 8-10 ಲೋಟ ನೀರು ಕುಡಿಯುವ ಮೂಲಕ ದೇಹವನ್ನು ನಿರ್ಜಲೀಕರಣದಿಂದ ಕಾಪಾಡಿಕೊಳ್ಳಬೇಕು. ದಿನಕ್ಕೆ 7-8 ಗಂಟೆಗಳ ಉತ್ತಮ ನಿದ್ರೆ, ಹಾಗೂ ಹಗುರವಾದ ವ್ಯಾಯಾಮ ದೇಹದ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಮನೆ ಮತ್ತು ಸುತ್ತಮುತ್ತಲಿನ ಪ್ರದೇಶವನ್ನು ಸದಾ ಸ್ವಚ್ಛವಾಗಿಟ್ಟುಕೊಳ್ಳಬೇಕು. ಕಸವನ್ನು ಸರಿಯಾಗಿ ವಿಲೇವಾರಿ ಮಾಡಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಮ್ಮ ಕ್ಲಿನಿಕ್ ವೈದ್ಯಾಧಿಕಾರಿಗಳು, ಕೀಟಶಾಸ್ತ್ರಜ್ಞರು, ಜಿಲ್ಲಾ ಡಿ.ವಿ.ಬಿ.ಡಿ.ಸಿ.ಪಿ ಸಲಹೆಗಾರರು, ಮೇಲ್ವಿಚಾರಣ ತಂಡ, ಯರಗುಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು, ಆಶಾ ಕಾರ್ಯಕರ್ತೆಯರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಕೊಪ್ಪಳ ಜಿಲ್ಲೆಯಲ್ಲಿ ಬೆಳೆ ಹಾನಿ ಖುದ್ದು ಪರಿಶೀಲಿಸಿದ ಸಚಿವರಾದ ಶಿವರಾಜ ತಂಗಡಗಿ

ಕೊಪ್ಪಳ ಆ.06-

ಕರ್ನಾಟಕ ಸರ್ಕಾರದ ಸಂಪುಟ ದರ್ಜೆ ಸಚಿವರಾದ ಶ್ರೀ ಶಿವರಾಜ ಎಸ್. ತಂಗಡಗಿ ಅವರು ಪೂರ್ವ ನಿಗದಿಯಂತೆ ಆಗಸ್ಟ 5ರಂದು ಕೊಪ್ಪಳ ಗ್ರಾಮೀಣ ಭಾಗದಲ್ಲಿ ಪ್ರವಾಸ ಕೈಗೊಂಡು ಬರ ಪರಿಸ್ಥಿತಿಯ ಅವಲೋಕನ ನಡೆಸಿದರು.

ಮೊದಲಿಗೆ ಗಂಗಾವತಿ ತಾಲ್ಲೂಕಿನ ವೆಂಕಟಗಿರಿ ಹೋಬಳಿಯ ವ್ಯಾಪ್ತಿಯ ಬಂಡ್ರಾಳ ಗ್ರಾಮಕ್ಕೆ ತೆರಳಿ ಬೆಳೆ ಹಾನಿ ಹಾಗೂ ಬರ ವೀಕ್ಷಣೆ ನಡೆಸಿದರು. ಬಂಡ್ರಾಳ ಗ್ರಾಮದ ಹನುಮಮ್ಮ ಗಂಡ ಮಲಿಯಪ್ಪ ನಾಯಕ ಅವರ ಒಂದು ಎಕರೆ 36 ಗುಂಟೆಯಲ್ಲಿ ಬೆಳೆದ ಸಜ್ಜಿ ಬೆಳೆ ವೀಕ್ಷಣೆ ನಡೆಸಿದರು. ಮಳೆಯಿಲ್ಲದೇ ಬೆಳೆ ಹಾಳಾಗಿದೆ ಎಂದು ಹನುಮಮ್ಮ ಮತ್ತು ಅವರ ಮಕ್ಕಳು ಸಚಿವರ ಎದುರು ತಮ್ಮ ಅಳಲು ತೋಡಿಕೊಂಡರು.

ಗಡ್ಡಿ ಗ್ರಾಮದ ಮುದ್ದಾನಪ್ಪ ತಂದೆ ನಾಗಪ್ಪ ಭಜಂತ್ರಿ ಅವರ ಹೊಲದಲ್ಲಿನ ಮೆಕ್ಕೆ ಜೋಳ ಬೆಳೆಯು ಸಹ ಮಳೆಯಿಲ್ಲದೆ ಹಾಳಾಗಿದೆ ಎಂದು ಗಡ್ಡಿ ಗ್ರಾಮಸ್ಥರು ಸಚಿವರಿಗೆ ತಿಳಿಸಿದರು.

ಕಂದಾಯ ಇಲಾಖೆಗೆ ವರದಿ: ನಾಳೆ ಆಗಸ್ಟ್06ರಂದು ಕೊಪ್ಪಳದಲ್ಲಿ ಅಧಿಕಾರಿಗಳೊಂದಿಗೆ ಸಭೆ ಮಾಡುತ್ತೇನೆ. ಸಿಎಂ ಅವರು ಎಲ್ಲ ಸಚಿವರಿಗೆ ಸೂಚನೆ ನೀಡಿ ಬರ ವೀಕ್ಷಣೆ ನಡೆಸಲು ಹೇಳಿದ್ದಾರೆ. ಜಿಲ್ಲೆಯಲ್ಲಿ ಇಂದು,



ನಾಳೆ, ನಾಡಿದ್ದು ವಿವಿಧೆಡೆ ಸಂಚರಿಸಿ ಮುಂಗಾರು ಋತುವಿನ ಎಲ್ಲ ಬೆಳೆಗಳ ಪರಿಸ್ಥಿತಿ ಅವಲೋಕಿಸುತ್ತೇನೆ. ಬೆಳೆ ಹಾನಿಗೆ ಏನು ಪರಿಹಾರ ಕೊಡಬೇಕು. ಇದಕ್ಕಾಗಿ ಅಧಿಕಾರಿಗಳು ಏನು ಮಾಡಿದ್ದಾರೆ ಎಂದು ಪರಿಶೀಲಿಸುತ್ತೇನೆ. ಬರ ಘೋಷಣೆಗೆ ಸಂಬಂಧಿಸಿದಂತೆ ಯಾವ ರೈತರಿಗೂ, ಯಾವ ತಾಲೂಕಿನ ರೈತರಿಗೂ ಅನ್ಯಾಯವಾಗದಂತೆ ಕ್ರಮವಹಿಸಲಾಗುವುದು. ಈ ಬಗ್ಗೆ ಕಂದಾಯ ಇಲಾಖೆಗೆ ವರದಿ ಒಪ್ಪಿಸಲಾಗುವುದು ಎಂದು ಸಚಿವರು ಇದೆ ವೇಳೆ ಸುದ್ದಿಗಾರರಿಗೆ ತಿಳಿಸಿದರು.

ಗ್ರಾಮಸ್ಥರಿಂದ ಸ್ವಾಗತ: ಸಂಪುಟ ದರ್ಜೆ ಸಚಿವರಾದ ಮೇಲೆ ಮೊದಲ ಬಾರಿಗೆ ತವರು ಜಿಲ್ಲೆಗೆ ಆಗಮಿಸಿದ ಸಚಿವರಾದ ಶಿವರಾಜ ತಂಗಡಗಿ ಅವರಿಗೆ ಬಂಡ್ರಾಳ ಹಾಗೂ ಗಡ್ಡಿ ಗ್ರಾಮಸ್ಥರು ಆತ್ಮೀಯ ಸ್ವಾಗತ ಕೋರಿದರು. ಪಟಾಕಿ ಸಿಡಿಸಿ, ಹೂವಿನ ಹಾರ ಹಾಕಿ ಸಂಭ್ರಮಿಸಿದರು.

ಈ ವೇಳೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ, ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ರಾಮ್ ಎಲ್ ಅರಸಿದ್ದಿ, ಕೊಪ್ಪಳ ಸಹಾಯಕ ಆಯುಕ್ತರಾದ ಮೆಹಬೂಬ ಜಿಲಾನಿ, ಜಿಪಂ ಉಪ ಕಾರ್ಯದರ್ಶಿ ಕೃಷ್ಣಮೂರ್ತಿ, ಗಂಗಾವತಿ ಡಿವೈಎಸ್ಪಿ ಜೆ ಎಸ್ ನ್ಯಾಮಗೌಡರ, ಜಂಟಿ ಕೃಷಿ ನಿರ್ದೇಶಕರಾದ ಕೃಷ್ಣಮೂರ್ತಿ, ಜಂಟಿ ತೋಟಗಾರಿಕಾ ನಿರ್ದೇಶಕರಾದ ಕೃಷಿ ವಿಸ್ತರಣಾ ಶಿಕ್ಷಣ ಘಟಕದ ಡಾ.ಬದ್ರಿ ಪ್ರಸಾದ, ಗಂಗಾವತಿಯ ಸಹಾಯಕ ಕೃಷಿ ನಿರ್ದೇಶಕರಾದ ಡಾ.ಅಭಿಲಾಷ ಸಿ ಸೇರಿದಂತೆ ಇತರರು ಇದ್ದರು.



ಉಚಿತ ಬೆನ್ನುಮೂಳೆ ತಪಾಸಣಾ ಶಿಬಿರ

ವಿಜಯನಗರ,ಆ.06-

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, 60 ಹಾಸಿಗೆಗಳ ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಹಾಗೂ ಭಗವಾನ್ ಮಹಾವೀರ ಜೈನ್ ಆಸ್ಪತ್ರೆಯ ಸಂಯುಕ್ತ ಆಶ್ರಯದಲ್ಲಿ ಬುಧವಾರ ಉಚಿತ ಬೆನ್ನುಮೂಳೆಯ ನ್ಯೂನತೆ (ಸ್ಕೋಲಿಯೋಸಿಸ್) ತಪಾಸಣಾ ಶಿಬಿರ ನಡೆಯಿತು.

ಶಿಬಿರದಲ್ಲಿ ಭಾಗವಹಿಸಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾ ಧಿಕಾರಿ ಡಾ. ಟಿ. ಲಿಂಗರಾಜು ಮಾತನಾಡಿ, ಸಾಮಾನ್ಯವಾಗಿ ಬೆನ್ನುಮೂಳೆಯು ಹಿಂದಿನಿಂದ ನೋಡಿದಾಗ ನೇರವಾಗಿ ಕಾಣಿಸುತ್ತದೆ. ಆದರೆ ಸ್ಕೋಲಿಯೋಸಿಸ್ ಸಮಸ್ಯೆಯಿರುವ ಮಕ್ಕಳು ಹಾಗೂ ಹದಿಹರೆಯದವರಲ್ಲಿ ಬೆನ್ನುಮೂಳೆಯು ಅಸಹಜ ಅಥವಾ ಆಕಾರದ ವಕ್ರತೆಯನ್ನು ಹೊಂದಿರುತ್ತದೆ. ಈ ಸಮಸ್ಯೆಯ ಲಕ್ಷಣಗಳು, ಚಿಕಿತ್ಸೆ ಹಾಗೂ ವೈದ್ಯಕೀಯ ಸಲಹೆಗಳ ಬಗ್ಗೆ ಜಾಗೃತಿ ಮೂಡಿಸುವುದು ಶಿಬಿರದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು. ಶಿಬಿರದಲ್ಲಿ 9 ಮಕ್ಕಳು ಹೊಸದಾಗಿ ನೋಂದಾಯಿತರಾಗಿದ್ದು, 4 ಮಕ್ಕಳಿಗೆ ಮರು ತಪಾಸಣೆ (ಫಾಲೋ-ಅಪ್) ನಡೆಸಿ ಚಿಕಿತ್ಸೆ ಮುಂದುವರಿಸಲು ಸೂಚಿಸಲಾಗಿದೆ. ಒಟ್ಟು 7 ಮಕ್ಕಳನ್ನು ಉಚಿತ ಶಸ್ತ್ರ ಚಿಕಿತ್ಸೆ ಗೆ ಆಯ್ಕೆ ಮಾಡಲಾಗಿದ್ದು, ಇಬ್ಬರಿಗೆ ಎಕ್ಸ್ -ರೇ ಪರೀಕ್ಷೆ ನಡೆಸಲಾಗಿದೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಜಂಬಯ್ಯ ಮಾತನಾಡಿ, ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿ ರಾಜ್ಯದಲ್ಲಿ ಅನೇಕ ಉಚಿತ ಶಸ್ತ್ರಚಿಕಿತ್ಸೆ ಗಳನ್ನು ಯಶಸ್ವಿಯಾಗಿ ನಡೆಸಲಾಗಿದೆ. ಸಾಮಾನ್ಯವಾಗಿ ಬೆನ್ನುಮೂಳೆಯ ಶಸ್ತ್ರಚಿಕಿತ್ಸೆ ಗೆ 4ರಿಂದ 5 ಲಕ್ಷ ರೂ. ವರೆಗೆ ವೆಚ್ಚವಾಗುತ್ತದೆ. ಆದರೆ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ನೆರವಾಗುವ ಉದ್ದೇಶದಿಂದ ಬೆಂಗಳೂರಿನ ಭಗವಾನ್ ಮಹಾವೀರ ಜೈನ್ ಆಸ್ಪತ್ರೆ ಹಾಗೂ ಜಿಲ್ಲಾ ಆರೋಗ್ಯ ಇಲಾಖೆಯ ಸಹಯೋಗದಲ್ಲಿ ಈ ಚಿಕಿತ್ಸೆ ಯನ್ನು ಉಚಿತವಾಗಿ ನೀಡಲಾಗುತ್ತಿದೆ. ಅರ್ಹರು ಈ ಸೌಲಭ್ಯದ ಪ್ರಯೋಜನ ಪಡೆಯಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ರಾಧಿಕಾ, ಅರಿವಳಿಕೆ ತಜ್ಞ ಡಾ. ನೂರ್ ಪಾಷಾ, ಭಗವಾನ್ ಮಹಾವೀರ ಜೈನ್ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಅಲೋಕ್, ಆರೋಗ್ಯ ಸಿಬ್ಬಂದಿ ಹಾಗೂ ಫಲಾನುಭವಿಗಳು ಉಪಸ್ಥಿತರಿದ್ದರು.

ಬಾಲ್ಯ ವಿವಾಹ ನಿಷೇಧ ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ: ನ್ಯಾ. ಮಹಾಂತೇಶ್ ಎಸ್. ದರಗದ್

ಕೊಪ್ಪಳ ಆ.06-

ಮಕ್ಕಳ ಮೇಲಿನ ದೌರ್ಜನ್ಯ ತಡೆ, ಕಾನೂನು ನೆರವು ಪಡೆಯುವ ವಿಧಾನಗಳನ್ನು ಅರಿತುಕೊಳ್ಳುವುದರ ಜೊತೆಗೆ, ವಿದ್ಯಾರ್ಥಿಗಳು ಶಿಸ್ತು ಮತ್ತು ನೈತಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಜವಾಬ್ದಾರಿಯುತ ನಾಗರಿಕರಾಗಬೇಕು. ಬಾಲ್ಯ ವಿವಾಹ ನಿಷೇಧ ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆಗೆ ನಾವೆಲ್ಲರೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ಮಹಾಂತೇಶ್ ಎಸ್. ದರಗದ್ ಕರೆ ನೀಡಿದರು.

ಬುಧವಾರದಂದು ಬಳ್ಳಾರಿ ರೀಡ್ಸ್ ಸಂಸ್ಥೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕೊಪ್ಪಳ, ಮಕ್ಕಳ ವಿಶೇಷ ಪೊಲೀಸ್ ಘಟಕ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಇವರುಗಳ ಸಂಯುಕ್ತಾಶ್ರಯದಲ್ಲಿ ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಬಾಲ್ಯವಿವಾಹ ನಿಷೇಧ, ಪೋಕ್ಸೋ, ಸೈಬರ್ ಕ್ರೈಂ, ಮಾದಕ ದ್ರವ್ಯ ಮುಕ್ತ ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ತಡೆ ಕುರಿತು ಜಿಲ್ಲಾಮಟ್ಟದಲ್ಲಿ ಹಮ್ಮಿಕೊಂಡಿದ್ದ ಹದಿಹರೆಯದ ಹೆಣ್ಣುಮಕ್ಕಳ ಸಮಾವೇಶ-2026 ಅನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಭವಿಷ್ಯದ ಜವಾಬ್ದಾರಿಯುತ ಪ್ರಜೆಗಳಾದ ನೀವುಗಳು ಸಮಾಜದ ಅನಿಷ್ಠ ಪದ್ಧತಿಗಳ ಬಗ್ಗೆ, ದುಶ್ಚಟಗಳ ದುಷ್ಪರಿಣಾಮದ ಬಗ್ಗೆ ಅರಿತುಕೊಳ್ಳಬೇಕು. ಅವುಗಳಿಂದ ದೂರ ಇರುವುದರ ಜೊತೆಗೆ ನಿಮ್ಮ ಸುತ್ತಲಿನ ಪರಿಸರದಲ್ಲೂ ಕೂಡ ಯಾರೂ ದುಶ್ಚಟಗಳಿಗೆ ಬಲಿಯಾಗದಂತೆ ನೋಡಿಕೊಳ್ಳಬೇಕು. ಮೊಬೈಲ್ ಎನ್ನುವ ಮಾಯಾಜಾಲವನ್ನು ನಿಮ್ಮ ವಿದ್ಯಾಭ್ಯಾಸ, ಶೈಕ್ಷಣಿಕ ಉಪಯೋಗಕ್ಕಾಗಿ ಮಾತ್ರ ಬಳಸಬೇಕು. ಮೊಬೈಲ್ ಗೆ ಅಂಟಿಕೊಳ್ಳಬಾರದು. ಸೈಬರ್ ಕ್ರೈಮ್ ಇಂದು ನಿಮ್ಮಂತಹ ಯುವ ಜನರನ್ನೇ ಗುರಿಯಾಗಿಸಿಕೊಂಡು ವಿವಿಧ ಆಮಿಷಗಳ ಮೂಲಕ ನಿಮ್ಮನ್ನು ಬಲಿ ಪಡೆಯುತ್ತಿದ್ದಾರೆ. ಆದ್ದರಿಂದ ಮೊಬೈಲ್ ಬಳಕೆ ಮಿತಿಗೊಳಿಸಿ, ಸೈಬರ್ ಕ್ರೈಮ್ ನಿಂದ ಸುರಕ್ಷಿತವಾಗಿರಿ ಎಂದು ತಿಳಿಸಿದ ಅವರು ಬಾಲ್ಯ ವಿವಾಹ ನಿಷೇಧ ಕಾಯ್ದೆ-2006, ನಾಲ್ಸಾ ಜಾಗೃತಿ ಯೋಜನೆ-2025, ನಾಲ್ಸಾ ಯೋಜನೆ-2015 ಮತ್ತು ಸಂಕಷ್ಟದ ಸಮಯದಲ್ಲಿ ನೆರವಿಗೆ ಬರುವ '1098' (ಚೈಲ್ಡ್‌ಲೈನ್) ಹಾಗೂ '112' (ತುರ್ತು ಸೇವೆ) ಸಹಾಯವಾಣಿಗಳ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ಸಮಗ್ರ ಮಾಹಿತಿ ನೀಡಿದರು. ಕೊಪ್ಪಳ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಆರ್. ಹೇಮಂತ್ ಕುಮಾರ್ ಅವರು ಮಾತನಾಡಿ, ಸೈಬರ್ ಅಪರಾಧಗಳಿಂದ ಸುರಕ್ಷಿತವಾಗಿರುವುದು ಹಾಗೂ ಪೋಕ್ಸೋ ಕಾಯ್ದೆಯಡಿ ಲಭ್ಯವಿರುವ ಕಾನೂನು ರಕ್ಷಣೆಗಳ ಕುರಿತು ಜಾಗೃತಿ ಮೂಡಿಸಿದರು.

ಇದೇ ವೇಳೆ ರೀಡ್ಸ್ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕರಾದ ಸಿ.ತಿಪ್ಪೇಶಪ್ಪ ಹಾಗೂ ಜಿಲ್ಲಾ ಯುನಿಸೆಫ್ ಘಟಕದ ಹರೀಶ ಜೋಗಿ ಅವರು ಬಾಲ್ಯ ವಿವಾಹ ನಿಷೇಧ, ಪೋಕ್ಸೋ, ಸೈಬರ್ ಕ್ರೈಮ್, ಮಾದಕ ವ್ಯಸನ ಮುಕ್ತ ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ತಡೆ ಕುರಿತು ಹದಿಹರೆಯದ ಹೆಣ್ಣುಮಕ್ಕಳಿಗೆ ಕಾನೂನು ರಕ್ಷಣೆಗಳ ಕುರಿತು ತಿಳಿಸಿದರು.

ಬೃಹತ್ ಜಾಗೃತಿ ಜಾಥಾ:

ಸಮಾವೇಶಕ್ಕೂ ಮುನ್ನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಅವರು ಎಸ್.ಪಿ. ಕಚೇರಿ ಆವರಣದಲ್ಲಿ ಜಿಲ್ಲಾಮಟ್ಟದ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿದರು. ಎಸ್.ಪಿ. ಕಚೇರಿಯಿಂದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನವರೆಗೆ ನಡೆದ ಈ ಜಾಥಾದಲ್ಲಿ ವಿದ್ಯಾರ್ಥಿನಿಯರು ಹಾಗೂ ರೀಡ್ಸ್ ಸಂಸ್ಥೆಯ ಸಿಬ್ಬಂದಿ ಬಾಲ್ಯವಿವಾಹ ನಿಷೇಧ, ಪೋಕ್ಸೋ, ಸೈಬರ್ ಅಪರಾಧ ಹಾಗೂ ಮಾದಕ ದ್ರವ್ಯ ತಡೆಯ ಕುರಿತಾದ ಜಾಗೃತಿ ನಾಮಫಲಕಗಳನ್ನು ಹಿಡಿದು ಘೋಷಣೆಗಳನ್ನು ಕೂಗಿದರು. ಕಾರ್ಯಕ್ರಮದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಪ್ರಕಾಶ್ ಶಿವಪ್ಪ ಕಡಗದ, ಸೈಬರ್ ಕ್ರೈಮ್ ವಿಭಾಗದ ಡಿ.ವೈ.ಎಸ್.ಪಿ ಸಿದ್ದಲಿಂಗಪ್ಪ ಗೌಡ ಪಾಟೀಲ್, ಡಿ.ಎಸ್. ಆಂಜನೇಯ, ರೀಡ್ಸ್ ಸಂಸ್ಥೆಯ ಯೋಜನಾ ವ್ಯವಸ್ಥಾಪಕ ಮಲ್ಲೇಶ ಜಾಧವ್ ಸೇರಿದಂತೆ ಸಂಸ್ಥೆಯ ಸಿಬ್ಬಂದಿ, ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಆ.8-9ರಂದು ರಾಯಚೂರಿನಲ್ಲಿ ಮೊದಲ ಬ್ಯಾಡ್ಮಿಂಟನ್ ಪ್ರೀಮಿಯರ್ ಲೀಗ್

ಮಹಾತ್ಮ ಗಾಂಧಿ ಒಳಾಂಗಣ ಕ್ರೀಡಾಂಗಣ ಸೇರಿದಂತೆ ವಿವಿಧ ಕೇಂದ್ರಗಳಿಂದ ಒಟ್ಟು 156 ಆಟಗಾರರು ನೋಂದಣಿ ಮಾಡಿಕೊಂಡಿದ್ದರು. ಜುಲೈ 26ರಂದು ನಡೆದ ಹರಾಜು ಪ್ರಕ್ರಿಯೆಯಲ್ಲಿ 152 ಆಟಗಾರರು ವಿವಿಧ ತಂಡಗಳಿಗೆ ಆಯ್ಕೆಯಾಗಿದ್ದು, ನಾಲ್ವರು ಆಟಗಾರರು ಆಯ್ಕೆಯಾಗಿಲ್ಲ ಎಂದು ತಿಳಿಸಿದರು.

ಬುಲ್ಸ್, ಪ್ಯಾಂಥರ್ಸ್, ಚೀತಾಸ್, ಲಯನ್ಸ್, ಈಗಲ್ಸ್, ಟೈಗರ್ಸ್, ರೈನೋಸ್ ಹಾಗೂ ಕೋಬ್ರಾಸ್ ಸೇರಿ ಎಂಟು ತಂಡಗಳು ಪ್ರಶಸ್ತಿಗಾಗಿ ಸೆಣಸಲಿವೆ. ವಿಜೇತ ತಂಡಕ್ಕೆ ₹1 ಲಕ್ಷ ಹಾಗೂ ರನ್ನರ್-ಅಪ್ ತಂಡಕ್ಕೆ ₹50 ಸಾವಿರ ನಗದು ಬಹುಮಾನ ನೀಡಲಾಗುವುದು ಎಂದು ಹೇಳಿದರು. ಜಿಲ್ಲೆಯಲ್ಲಿ ಬ್ಯಾಡ್ಮಿಂಟನ್ ಕ್ರೀಡೆಯ ಬೆಳವಣಿಗೆಗೆ ಈ ಲೀಗ್ ಉತ್ತೇಜನ ನೀಡಲಿದ್ದು, ಯುವ ಪ್ರತಿಭೆಗಳಿಗೆ ತಮ್ಮ ಸಾಮರ್ಥ್ಯ ಪ್ರದರ್ಶಿಸಲು ಉತ್ತಮ ವೇದಿಕೆಯಾಗಲಿದೆ. ಸಾರ್ವಜನಿಕರು ಹಾಗೂ ಕ್ರೀಡಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಪಂದ್ಯಾವಳಿಯನ್ನು ಯಶಸ್ವಿಗೊಳಿಸುವಂತೆ ಅವರು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಚೇತನ್, ಅರ್ಜುನ್, ರಾಮಣ್ಣ ಸೇರಿದಂತೆ ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿ ಯೇಷನ್‌ನ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಬೂಮಾನಂದ ಹದ್ದಿನಾಳ ಹತ್ಯೆ ಖಂಡನೀಯ

ಪ್ರಕರಣದ ಆರೋಪಿಗಳ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳಬೇಕು. ಪರಿಶಿಷ್ಟ ಜಾತಿಯವರ ಮೇಲೆ ದೌರ್ಜನ್ಯ ಎಸಗುವ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಜಿಲ್ಲೆಯಲ್ಲಿ ಸಾಮಾಜಿಕ ಉದ್ವಿಗ್ನತೆ ಇರುವ ಗ್ರಾಮಗಳನ್ನು ಗುರುತಿಸಿ ಪೊಲೀಸ್ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆ ಜಂಟಿಯಾಗಿ ಸಾಮರಸ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಎಂ. ಕೃಷ್ಣಮೂರ್ತಿ ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಕಾರ್ಯದರ್ಶಿ ಬಸವರಾಜ ಬಂಡಾರಿ, ರಾಜ್ಯ ಕಾರ್ಯದರ್ಶಿ ಹನುಮಂತಪ್ಪ (ವಕೀಲರು), ಜಿಲ್ಲಾ ಅಧ್ಯಕ್ಷ ಜೈ ಭೀಮ್, ಜಿಲ್ಲಾ ಉಸ್ತುವಾರಿ ಬುಡ್ಡಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್ ಎಂ.ಆರ್. ಭೇರಿ, ಯೇಸು ಗಣಧಳ್, ವೈ. ನರಸಪ್ಪ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

ದಲಿತ ಯುವಕನ ಮೇಲೆ ಮರಣಾಂತಿಕ ಹತ್ಯೆ

ಬಸವರಾಜ ಸಿ ಹಾದಿಮನಿ ಅವರು ಮಾನ್ಯ ಸುರಪುರ ಉಪ ತಹಶೀಲ್ದಾರರಾದ ಮಲ್ಲಯ್ಯ ದುಂಡು ಅವರ ಮೂಲಕ ಸನ್ಮಾನ್ಯ ಶ್ರೀ ಮುಖ್ಯಮಂತ್ರಿಗಳಾದ ಡಿಕೆ ಶಿವಕುಮಾರ್ ಅವರು ಮತ್ತು ಗೃಹ ಸಚಿವರಾದ ಪ್ರಿಯಾಂಕ ಖರ್ಗೆ ಅವರಿಗೆ ಮನವಿ ಪುತ್ರ ಸಲ್ಲಿಸಿ ಮಾತನಾಡಿ.

ನಮಗೆ ಸ್ವಾತಂತ್ರ ಸಿಕ್ಕು 80 ವರ್ಷಗಳಾದರೂ ಇನ್ನೂ ಈ ಭಾರತದಲ್ಲಿ ಜಾತಿ ವ್ಯವಸ್ಥೆಯ ತಾರತಮ್ಯವನ್ನು ತೊಲಗಿಸಲು ಸಾಧ್ಯವಾಗಿಲ್ಲ ಈಗಲಾದರೂ ಕೂಡ ನಮ್ಮ ಮೇಲೆ ಮರಣಾಂತಿಕ ಹಲ್ಲೆ ಆಗುತ್ತಲೇ ಇರುತ್ತವೆ.ಇದರಿಂದ ನಮಗೆ ಜೀವನ ಮಾಡಲಿಕೆ ಕಷ್ಟವಾಗಿದೆ ಮಾನ್ಯ ಮುಖ್ಯಮಂತ್ರಿಗಳು ಮತ್ತು ಗೃಹ ಸಚಿವರು ಹಲ್ಲೆ ಮಾಡಿದಅವರ ಮೇಲೇ ಕಾನೂನು ಕ್ರಮವನ್ನು ತೆಗೆದುಕೊಂಡು ಹಲ್ಲೆ ಮಾಡಿದ ವ್ಯಕ್ತಿಗಳನ್ನು ಗಲ್ಲಿಗೇರಿಸಬೇಕು ಎಂದು ಹೇಳಿದರು

ಮಾದಿಗ ದಂಡೋರ ಹೋರಾಟದ ಹಿರಿಯ ಮುಖಂಡ ಶ್ರೀ ಬಲಭೀಮಣ್ಣ. ಬೋನಾಳ.ತಾಲೂಕು ಪ್ರಧಾನ ಕಾರ್ಯದರ್ಶಿ, ಭೀಮರಾಯ ದೇವತಕಲ್. ಲಕ್ಷ್ಮಣ ಆಲ್ದಾಳ ಉಪಾಧ್ಯಕ್ಷರು.ಹಣಮಂತ ಅಡ್ಡ ಸಹ ಕಾರ್ಯದರ್ಶಿ ಈಶ್ವರ ಸತ್ಯಂಪೇಟೆ.ಮಲ್ಲು ಬೆನಕನಹಳ್ಳಿ ಮಲ್ಲು ವಗಣಿಗೇರಾ.ರವಿ ವಗನಗೇರ.ಅಮರೇಶ್ವರ.

ಪ್ರವೀಣ್ ದೊಡ್ಡಮನಿ ಹನುಮಂತ ದೇವಿಕೆರ. ಸೋಮು ಕಟ್ಟಿಮನಿ. ಬಸವರಾಜ. . ಅಯ್ಯಣ್ಣ ಬಿಲ್ಲವ. ಹಣಮಂತ ಕಟ್ಟಿಮನಿ ಅಧ್ಯಕ್ಷರು ನಾಗರಾಳ.ಮಾದಿಗ ದಂಡೋರ ಎಮ್‌ಆರಪಿಎಸ್. ಸಂಘಟನೆಯ ಎಲ್ಲ ಮುಖಂಡರು ಮತ್ತು ಸದಸ್ಯರು ಈ ಹೋರಾಟದಲ್ಲಿ ಭಾಗಿಯಾಗಿದ್ದರು

ಕಾಲೇಜು ಕಟ್ಟಡಕ್ಕೆ ಆಗ್ರಹಿಸಿ ವಿದ್ಯಾರ್ಥಿಗಳ ಪ್ರತಿಭಟನೆ

ಪ್ರಾಂಶುಪಾಲರು ಹಾಗೂ ಉಪನ್ಯಾಸಕರು ಕರ್ತವ್ಯ ನಿರ್ವಹಿಸುತ್ತಿದ್ದರೂ, ಸುರಕ್ಷಿತ ಕಟ್ಟಡದ ಕೊರತೆಯಿಂದ ಶೈಕ್ಷಣಿಕ ವಾತಾವರಣಕ್ಕೆ ಧಕ್ಕೆಯಾಗುತ್ತಿದೆ ಎಂದು ಉಲ್ಲೇಖಿಸಲಾಗಿದೆ. ರಾಯಚೂರಿನ ಹೃದಯಭಾಗದಲ್ಲಿ ಸೂಕ್ತ ಜಾಗವನ್ನು ಗುರುತಿಸಿ ಹೊಸ ಕಾಲೇಜು ಕಟ್ಟಡ ನಿರ್ಮಾಣಕ್ಕೆ ತಕ್ಷಣ ಆಡಳಿತಾತ್ಮಕ ಅನುಮೋದನೆ ನೀಡಿ ಅಗತ್ಯ ಅನುದಾನ ಬಿಡುಗಡೆ ಮಾಡಬೇಕು ಎಂದು ವಿದ್ಯಾರ್ಥಿಗಳು ಒತ್ತಾಯಿಸಿದರು.

ಯಾವುದೇ ದುರಂತ ಸಂಭವಿಸುವ ಮುನ್ನವೇ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಜಿಲ್ಲಾಡಳಿತ ಮಧ್ಯಪ್ರವೇಶಿಸಿ ಹೊಸ ಕಾಲೇಜು ಕಟ್ಟಡ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ಅಲ್ಲಿಯವರೆಗೆ ವಿದ್ಯಾರ್ಥಿಗಳ ಸುರಕ್ಷತೆ ದೃಷ್ಟಿಯಿಂದ ಪರ್ಯಾಯ ಕಟ್ಟಡದಲ್ಲಿ ತರಗತಿಗಳನ್ನು ನಡೆಸುವ ವ್ಯವಸ್ಥೆ ಕಲ್ಪಿಸಬೇಕು ಎಂದು ವಿದ್ಯಾರ್ಥಿಗಳು ಆಗ್ರಹಿಸಿದರು

ರಾಯಚೂರು ನಗರದ ವಿವಿಧ ವಸತಿ ನಿಲಯಗಳಿಗೆ ಜಿಲ್ಲಾಧಿಕಾರಿಗ ಆಕಸ್ಮಿಕ ಭೇಟಿ ಮತ್ತು ಪರಿಶೀಲನೆ

ಗುತ್ತಿದೆಯೆ ಎಂದು ರಿಜಿಸ್ಟರ್ ಪರಿಶೀಲನೆ ಮಾಡಿದರು. ನಂತರ ಅಡುಗೆ ಕೋಣೆಗೆ ತೆರಳಿ ಅಲ್ಲಿನ ಆಹಾರ ಸಾಮಗ್ರಿಗಳನ್ನು ಪರಿಶೀಲಿಸಿ ಅಡುಗೆ ಸಿಬ್ಬಂದಿಗಳು ಮಾಡುತ್ತಿದ್ದ ಆಹಾರವನ್ನು ಪರಿಶೀಲನೆ ಮಾಡಿದ ಮಕ್ಕಳಿಗೆ ಉತ್ತಮ ರೀತಿಯಲ್ಲಿ ಆಹಾರ ಮಾಡಿ ಹಾಕಬೇಕು. ಬೆಳಿಗ್ಗೆ. ಮಧ್ಯಾಹ್ನ ಮತ್ತು ರಾತ್ರಿ ಊಟಕ್ಕೆ ಏನೇನು ಅಡುಗೆ ಮಾಡಿ ಹಾಕುತ್ತಿರಾ ಎಂದು ಅವರಿಂದ ಮಾಹಿತಿ ಪಡೆದು ಮಕ್ಕಳಿಗೆ ಯಾವುದೇ ಸಮಸ್ಯೆಗಳಾ ಗದಂತೆ ಸರಿಯಾದ ರೀತಿಯಲ್ಲಿ ಆಹಾರ ತೈಯಾರಿಸುವಂತೆ ಅಡುಗೆ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.

ನಂತರ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದ ಅವರು ಮಕ್ಕಳೆ ತಮಗೆ ವಸತಿ ನಿಲಯಗಳಲ್ಲಿ ಚೆನ್ನಾಗಿ ಊಟ ಹಾಕುತ್ತಾರ. ತಮ್ಮ ಮೆನುವಿನ ಪ್ರಕಾರ ಮೊಟ್ಟೆ ಹಾಗೂ ಇತರೆ ಆಹಾರ ಸಿಗುತ್ತಿದೆಯೆ ಇಲ್ಲದಿದ್ದರೆ ನನಗೆ ಹೇಳಿ. ತಮ್ಮ ಯಾವುದೇ ಸಮಸ್ಯೆಗಳಿದ್ದರೆ ನನಗೆ ತಿಳಿಸಿ . ಯಾರು ಭಯ ಪಡಬೇಕಾಗಿಲ್ಲ ತಮ್ಮ ಸಮಸ್ಯೆಗಳನ್ನು ಆಲಿಸಲು ನಾನು ಇಲ್ಲಿಗೆ ಬಂದಿದ್ದೆನೆ ಎಂದು ವಿದ್ಯಾರ್ಥಿಗಳ ಸಮಸ್ಯೆಗಳನ್ನು ಆಲಿಸಿ ತಮ್ಮ ಯಾವುದೇ ಸಮಸ್ಯೆಗಳಿದ್ದರೆ ನನ್ನ ಗಮನಕ್ಕೆ ತರಬೇಕೆಂದು ಹೇಳಿದರು. ವಸತಿ ನಿಲಯ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಜಿಲ್ಲಾಧಿಕಾ ರಿಗಳು ಜಿಲ್ಲೆಯ ಕೆಲವು ವಸತಿ ನಿಲ ಯಗಳಲ್ಲಿ ಆಹಾರ ಸೇವಿಸಿದ ನಂತರ ಮಕ್ಕಳು ಅಸ್ವಸ್ಥರಾದ ಪ್ರಕರಣಗಳು ಕಂಡು ಬರುತ್ತಿವೆ ಇಂತಹ ಪ್ರಕರಣಗಳು ಜಿಲ್ಲೆಯ ಯಾವುದೇ ವಸತಿ ನಿಲಯಗಳಲ್ಲಿ ಮರು ಕಳಿಸದಂತೆ ಮಕ್ಕಳಿಗೆ ಸರಿಯಾದ ರೀತಿಯಲ್ಲಿ ಮೆನುವಿನ ಪ್ರಕಾರ ಊಟ ನೀಡಬೇ ಕು. ಯಾ ವುದೇ ಸಮಸ್ಯೆಗಳಾದರೆ ಸಂಬಂಧಿ ಸಿದವರ ಮೇಲೆ ಕ್ರಮ ಜರುಗಿಸಲಾಗುತ್ತದೆ ಎಂದು ಸೂಚನೆ ನೀಡಿದರು.

ಪಿಒಪಿಗೆ ಗೇಟ್ ಪಾಸ್, ಮಣ್ಣಿನ ಗಣೇಶನಿಗಷ್ಟೇ ಅವಕಾಶ, ಗ್ರಾಮ ಪಂಚಾಯಿತಿಗಳಿಗೆ ಸರ್ಕಾರ ಖಡಕ್ ಸೂಚನೆ

ಪರಿಸರದ ಮೇಲೆ ಗಂಭೀರ ಪರಿಣಾಮ

ಪಿಒಪಿ ಮೂರ್ತಿಗಳನ್ನು ಕ್ಯಾಲ್ಸಿಯಂ ಸಲ್ಫೇಟ್ ಹೆಮಿಹೈಡ್ರೇಟ್ ಪುಡಿಯಿಂದ ತಯಾರಿಸಲಾಗುತ್ತದೆ. ಇದರಲ್ಲಿ ಸಲ್ಫರ್ ಬಣ್ಣದ್ರವ್ಯಗಳು, ಜಿಪ್ಸಮ್ ಮತ್ತು ಮೆಗ್ನೀಷಿಯಂನಂತಹ ವಸ್ತುಗಳು ಇರುತ್ತವೆ ಎಂದು ಖಂಡ್ರೆ ತಿಳಿಸಿದ್ದಾರೆ. ಈ ಮೂರ್ತಿಗಳಿಗೆ ಬಳಸುವ ಬಣ್ಣಗಳಲ್ಲಿ ಪಾದರಸ, ಕ್ಯಾಡ್ಮಿಯಂ ಹಾಗೂ ಸೀಸದಂತಹ ಅಪಾಯಕಾರಿ ಭಾರ ಲೋಹಗಳು ಇರುವ ಸಾಧ್ಯತೆಯಿದ್ದು, ಅವು ಪರಿಸರಕ್ಕೆ ಹಾನಿಕಾರಕವಾಗಿವೆ ಎಂದು ಅವರು ಹೇಳಿದ್ದಾರೆ. ಕೆರೆ, ನದಿ, ಬಾವಿ ಸೇರಿದಂತೆ ಇತರ ಜಲಮೂಲಗಳಲ್ಲಿ ಪಿಒಪಿ ಮೂರ್ತಿಗಳನ್ನು ವಿಸರ್ಜಿಸಿದಾಗ ಈ ಭಾರ ಲೋಹಗಳು ನೀರಿಗೆ ಸೇರುತ್ತವೆ. ಇದರಿಂದ ಮಾನವರು ಮತ್ತು ಪ್ರಾಣಿಗಳ ಆರೋಗ್ಯಕ್ಕೆ ಅಪಾಯ ಉಂಟಾಗುವುದರ ಜೊತೆಗೆ ಜಲಚರಗಳಿಗೂ ಹಾನಿಯಾಗುತ್ತದೆ ಎಂದು ಸಚಿವರು ವಿವರಿಸಿದ್ದಾರೆ.

ನಿಯಮ ಉಲ್ಲಂಘನೆಗೆ ಕಠಿಣ ಕ್ರಮ

1974ರ ಜಲ ಮಾಲಿನ್ಯ ತಡೆ ಮತ್ತು ನಿಯಂತ್ರಣ ಕಾಯ್ದೆಯ ಸೆಕ್ಷನ್ 33ಎ ಅನ್ನು ಉಲ್ಲೇಖಿಸಿದ ಖಂಡ್ರೆ, ರಾಜ್ಯದ ನದಿಗಳು, ಕೆರೆಗಳು, ಕೊಳಗಳು, ಜಲಾಶಯಗಳು, ಬಾವಿಗಳು ಹಾಗೂ ಇತರ ಜಲಮೂಲಗಳಲ್ಲಿ ಪಿಒಪಿ ಮೂರ್ತಿಗಳ ವಿಸರ್ಜನೆಯನ್ನು ನಿಷೇಧಿಸಲಾಗಿದೆ ಎಂದು ಹೇಳಿದ್ದಾರೆ.

2023ರ ಸೆಪ್ಟೆಂಬರ್ 15ರಂದು ಹೊರಡಿಸಲಾದ ಸರ್ಕಾರಿ ಆದೇಶದಲ್ಲಿ ಪರಿಸರಕ್ಕೆ ಹಾನಿಕಾರಕವಾದ ಪಿಒಪಿ ಮೂರ್ತಿಗಳ ತಯಾರಿಕೆ, ಸಾಗಣೆ, ಮಾರಾಟ ಹಾಗೂ ವಿಸರ್ಜನೆಯನ್ನು ನಿಷೇಧಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಕರ್ನಾಟಕ ಹೈಕೋರ್ಟ್ ಕೂಡ ಅಧಿಕಾರಿಗಳಿಗೆ ನಿರ್ದೇಶನ ನೀಡಿದೆ ಎಂದು ಅವರು ಹೇಳಿದ್ದಾರೆ.

ಆದ್ದರಿಂದ ನಿಷೇಧವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಮೂಲಕ ಜಲಮೂಲಗಳು ಮತ್ತು ಪರಿಸರವನ್ನು ರಕ್ಷಿಸಲು ಎಲ್ಲ ಗ್ರಾಮ ಪಂಚಾಯಿತಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಈಶ್ವರ ಖಂಡ್ರೆ ಸೂಚಿಸಿದ್ದಾರೆ.

ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ: ಡಾ. ಹನುಮಂತಪ್ಪ



ಬಳ್ಳಾರಿ,ಆ.06-

ಸಮುದಾಯಗಳಲ್ಲಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ. ಹನುಮಂತಪ್ಪ ಅವರು ನಿರ್ದೇಶನ ನೀಡಿದರು.

ಬಳ್ಳಾರಿ ತಾಲೂಕಿನ ಮೋಕಾ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಕ್ಷೇತ್ರ ಆರೋಗ್ಯ ಸಿಬ್ಬಂದಿಗಳೊದಿಗೆ ಬುಧವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

★ಡೆಂಗ್ಯೂ ಹಾಗೂ ಸಾಂಕ್ರಾಮಿಕ ರೋಗ ತಡೆ:★

ಆಶಾ ಕಾರ್ಯಕರ್ತೆಯರು ಪ್ರತಿದಿನ ಕಡ್ಡಾಯವಾಗಿ ಲಾರ್ವಾ ಸಮೀಕ್ಷೆ ನಡೆಸಬೇಕು. ಇದರ ಮೇಲ್ವಿಚಾರಣೆಯನ್ನು ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಪ್ರಾಥಮಿಕ ಸುರಕ್ಷಾಧಿಕಾರಿಗಳು ವಹಿಸಬೇಕು. ಗ್ರಾಮಗಳಲ್ಲಿ ನಿಯಮಿತವಾಗಿ ಆರೋಗ್ಯ ಜಾಗೃತಿ ಮೂಡಿಸುವುದರ ಜೊತೆಗೆ ಕುಡಿಯುವ ನೀರಿನ ಪರೀಕ್ಷೆಯನ್ನು ಕಡ್ಡಾಯಗೊಳಿಸಬೇಕು ಎಂದು ತಿಳಿಸಿದರು.

★ಆಯುಷ್ಮಾನ್ ಆರೋಗ್ಯ ಕೇಂದ್ರ ಹಾಗೂ ಯೋಗ:★

ಯೋಗ ಶಿಬಿರಗಳು ಮತ್ತು ಆರೋಗ್ಯ ಶಿಬಿರಗಳನ್ನು ಸಕ್ರಿಯವಾಗಿ ನಡೆಸಿ ಸಾರ್ವಜನಿಕರಿಗೆ ಗುಣಾತ್ಮಕ ಸೇವೆ ನೀಡಬೇಕು. ಅಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ಮಧುಮೇಹ ಮತ್ತು ಅಧಿಕ ರಕ್ತದೊತ್ತಡ ಪ್ರಕರಣಗಳ ಮರು-ಪರೀಕ್ಷೆ ನಡೆಸಿ, ಅಂಕಿ-ಅಶಗಳನ್ನು ಆನ್‌ಲೈನ್‌ನಲ್ಲಿ ನಮೂದಿಸಬೇಕು ಎಂದು ಹೇಳಿದರು.

★ಕ್ಷಯ ಮತ್ತು ಏಡ್ಸ್ ಜಾಗೃತಿ:★

ಕ್ಷಯಮುಕ್ತ ಭಾರತ' ಅಭಿಯಾನದಡಿ ಕ್ಷಯರೋಗಿಗಳ ಮನೆ ಹಾಗೂ ಸುತ್ತಮುತ್ತಲ ಜನರ ಕಫ ಪರೀಕ್ಷೆ ಮಾಡಿಸಬೇಕು. ಕಾಲೇಜು ಮತ್ತು ಸಮುದಾಯ ಮಟ್ಟದಲ್ಲಿ ಹೆಚ್.ಐ.ವಿ ಏಡ್ಸ್, ಹಾವು ಕಡಿತ ಹಾಗೂ ನಾಯಿ ಕಡಿತದಂತಹ ಪ್ರಕರಣಗಳ ತಡೆಗೆ ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ಸೂಚಿಸಿದರು.

★ಮಾತೃ ಮತ್ತು ಮಗುವಿನ ಆರೋಗ್ಯ:★

ಗರ್ಭಿಣಿಯರ ನೋಂದಣಿಯನ್ನು 3 ತಿಂಗಳ ಒಳಗಾಗಿ ಶೇ.100 ರಷ್ಟು ಪೂರ್ಣಗೊಳಿಸಬೇಕು. ಇದರಿಂದ ಅಪಾಯಕಾರಿ ಗರ್ಭಧಾರಣೆ ಹಾಗೂ ಹೆಣ್ಣು ಭ್ರೂಣ ಹತ್ಯೆಯನ್ನು ಪರಿಣಾಮಕಾರಿಯಾಗಿ ತಡೆಯಬಹುದು. ಗರ್ಭಿಣಿಯರ ಬಿ.ಎಮ್.ಐ ಮತ್ತು ಗೆಸ್ಟೊಸಿಸ್ ಸ್ಕೋರ್ ಕುರಿತು ನಿಯಮಿತ ನಿಗಾ ವಹಿಸಬೇಕು ಎಂದು ಸಲಹೆ ನೀಡಿದರು.

★ಪೌಷ್ಟಿಕಾಂಶ ಮತ್ತು ಲಸಿಕಾ ಕಾರ್ಯಕ್ರಮ: 6 ತಿಂಗಳಿದ 5 ವರ್ಷದೊಳಗಿನ ಮಕ್ಕಳಿಗೆ ನೀಡುವ ಕಬ್ಬಿಣಾಂಶದ ಸಿರಪ್ ಬಳಕೆಯ ಕುರಿತು ತಾಯಿ ಕಾರ್ಡ್‌ನಲ್ಲಿ ನಮೂದಿಸಿ, ಗೃಹ ಭೇಟಿ ನೀಡಿ ಪರಿಶೀಲಿಸಬೇಕು. 60 ರಿಂದ 70 ವರ್ಷದ ಹಿರಿಯ ನಾಗರಿಕರಿಗೂ ಕಬ್ಬಿಣಾಂಶ ಮಾತ್ರೆ ವಿತರಿಸಬೇಕು ಎಂದರು.

★ಯು-ವಿನ್ ಪೋರ್ಟಲ್ ಮತ್ತು ಹೆಚ್.ಪಿ.ವಿ ಲಸಿಕೆ:★

ಲಸಿಕಾ ಕಾರ್ಯಕ್ರಮದಲ್ಲಿ ಲಸಿಕೆ ಪಡೆದ ಪ್ರತಿಯೊಬ್ಬ ಫಲಾನುಭವಿಯ ವಿವರವನ್ನು ಯು-ವಿನ್ ಆನ್‌ಲೈನ್ ಪೋರ್ಟಲ್‌ನಲ್ಲಿ ನಮೂದಿಸುವುದು ಕಡ್ಡಾಯ. 14 ವರ್ಷದ ಎಲ್ಲಾ ಕಿಶೋರಿಯರಿಗೆ ಹೆಚ್.ಪಿ.ವಿ ಲಸಿಕೆ ನೀಡಿ ಶೇ.100 ರಷ್ಟು ಪ್ರಗತಿ ಸಾಧಿಸಬೇಕು. ಅಲ್ಲದೆ, ಆಗಸ್ಟ್ 7 ರವರೆಗೆ ನಡೆಯುವ ವಿಶ್ವ ಸ್ತನ್ಯಪಾನ ಸಪ್ತಾಹ'ವನ್ನು ಯಶಸ್ವಿಗೊಳಿಸಲು ಸೂಚಿಸಿದರು.

ಆರು ತಿಂಗಳಿನಿದ 5 ವರ್ಷದವರೆಗೆ ಕಬ್ಬಿಣಾಂಶದ ಮಕ್ಕಳಿಗೆ ನೀಡುವ ಸಿರಫ್ ಅನ್ನು ತಾಯಿ ಕಾರ್ಡ್‌ನಲ್ಲಿ ನಮೂದಿಸಲು ಹಾಗೂ 5 ವರ್ಷದೊಳಗಿನ ಮಕ್ಕಳ ಮನೆಯಲ್ಲಿ ಭೇಟಿ ನೀಡಿ ಸಿರಫ್ ತೆಗೆದುಕೊಳ್ಳುವ ಬಗ್ಗೆ ಅನುಸರಣೆ ಮಾಡಲು ತಿಳಿಸಿದರು.

ಸಭೆಯಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಪೊಂಪಾಪತಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್, ಶಿಡಿಗಿನಮೊಳ ಹಾಗೂ ಎಮ್.ಗೋನಾಳ್ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮೇಲ್ವಿಚಾರಣಾ ಸಿಬ್ಬಂದಿ ಉಪಸ್ಥಿತರಿದ್ದರು.

ದೇವಾಲಯಗಳು ದೇಶದ ಆರ್ಥಿಕ ಬೆಳವಣಿಗೆಯ ಶಕ್ತಿಕೇಂದ್ರಗಳು: ಪ್ರೊ.ಬಟ್ಟು ಸತ್ಯನಾರಾಯಣ



ಕಲಬುರಗಿ, ಆ.6 -

ಭಾರತೀಯ ದೇವಾಲಯಗಳು ಕೇವಲ ಧಾರ್ಮಿಕ ಕೇಂದ್ರಗಳಷ್ಟೇ ಅಲ್ಲ, ದೇಶದ ಆರ್ಥಿಕ ಬೆಳವಣಿಗೆ, ಉದ್ಯೋಗ ಸೃಷ್ಟಿ, ಸಾಮಾಜಿಕ ಅಭಿವೃದ್ಧಿ ಹಾಗೂ ಪ್ರವಾಸೋದ್ಯಮ ವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿರುವ ಶಕ್ತಿಕೇಂದ್ರಗಳಾಗಿವೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರವಾಸೋದ್ಯಮ ಮತ್ತು ಹೋಟೆಲ್ ನಿರ್ವಹಣಾ ವಿಭಾಗ, ಅರ್ಥಶಾಸ್ತ್ರ ಅಧ್ಯಯನ ಮತ್ತು ಯೋಜನಾ ವಿಭಾಗ ಹಾಗೂ ಭಾರತೀಯ ಸಮಾಜ ವಿಜ್ಞಾನ ಸಂಶೋಧನಾ ಮಂಡಳಿ (ಐಸಿಎಸ್‌ಎಸ್‌ಆರ್) ಸಹಯೋಗದಲ್ಲಿ ಆಯೋಜಿಸಿರುವ ''ದೇವಾಲಯ ಆರ್ಥಿಕತೆ, ಪ್ರವಾಸೋದ್ಯಮ ಮತ್ತು ಸಾರ್ವಜನಿಕ ನೀತಿ: ಆಡಳಿತ, ಜೀವನೋಪಾಯ ಮತ್ತು ಸುಸ್ಥಿರ ಪ್ರಾದೇಶಿಕ ಅಭಿವೃದ್ಧಿ'' ವಿಷಯದ ಮೂರು ದಿನಗಳ ಅಂತರರಾಷ್ಟ್ರೀಯ ಸಮ್ಮೇಳನವನ್ನು ಬುಧವಾರ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಪ್ರಮುಖ ದೇವಾಲಯಗಳು ಸಾರಿಗೆ, ವಸತಿ, ಆಹಾರ ಸೇವೆ ಸೇರಿದಂತೆ ಸ್ಥಳೀಯ ವ್ಯಾಪಾರ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಮೂಲಕ ರಾಷ್ಟ್ರೀಯ ಆರ್ಥಿಕತೆಗೆ ನೇರ ಹಾಗೂ ಪರೋಕ್ಷವಾಗಿ ಗಣನೀಯ ಕೊಡುಗೆ ನೀಡುತ್ತಿವೆ ಎಂದು ಅವರು ತಿಳಿಸಿದರು.

ತಿರುಮಲ ತಿರುಪತಿ ದೇವಸ್ಥಾನದ ಉದಾಹರಣೆ ನೀಡಿದ ಅವರು, ದೇಶದ ವಿವಿಧ ಭಾಗಗಳಿಂದ ಲಕ್ಷಾಂತರ ಭಕ್ತರನ್ನು ಆಕರ್ಷಿಸುವ ತೀರ್ಥಕ್ಷೇತ್ರಗಳು ಉದ್ಯೋಗ ಸೃಷ್ಟಿ ಹಾಗೂ ದೇಶದ ಒಟ್ಟು ದೇಶೀಯ ಉತ್ಪನ್ನ (ಜಿಡಿಪಿ) ವೃದ್ಧಿಗೂ ಮಹತ್ವದ ಪಾತ್ರವಹಿಸುತ್ತವೆ ಎಂದು ವಿವರಿಸಿದರು.


ಈ ಸಂದರ್ಭದಲ್ಲಿ ''ಕರ್ನಾಟಕದಲ್ಲಿನ ದೇವಾಲಯಗಳ ಆರ್ಥಿಕ ವಿಶ್ಲೇಷಣೆ: ಕಲಬುರಗಿಯ ಗಾಣಗಾಪುರ ದೇವಸ್ಥಾನದ ಅಧ್ಯಯನ'' ಎಂಬ ಸಂಶೋಧನಾ ವರದಿಯನ್ನು ಬಿಡುಗಡೆ ಮಾಡಲಾಯಿತು. ಈ ಅಧ್ಯಯನವನ್ನು ಸಿಯುಕೆಯ ಅರ್ಥಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕ ಡಾ. ಎಸ್. ಲಿಂಗಮೂರ್ತಿ ಅವರು ತೆಲಂಗಾಣ ಸಂಸ್ಕೃತಿ ಫೌಂಡೇಶನ್ ಸಹಯೋಗದಲ್ಲಿ ನಡೆಸಿದ್ದಾರೆ.

ಮುಖ್ಯ ಭಾಷಣ ಮಾಡಿದ ಐಐಎಂ ಲಕ್ನೋದ ಪ್ರಾಧ್ಯಾಪಕ ಡಾ. ವೆಂಕಟರಮಣಯ್ಯ ಸದ್ದಿಕುಟ ಅವರು ಶ್ರೀರಾಮ ಮಂದಿರ ಪುನರ್ನಿರ್ಮಾಣದ ಬಳಿಕ ಅಯೋಧ್ಯೆಯ ಆರ್ಥಿಕತೆ, ಪ್ರವಾಸೋದ್ಯಮ, ಉದ್ಯೋಗ ಹಾಗೂ ಮೂಲಸೌಕರ್ಯ ಅಭಿವೃದ್ಧಿಯ ಮೇಲೆ ಉಂಟಾದ ಪರಿಣಾಮಗಳನ್ನು ವಿಶ್ಲೇಷಿಸಿದರು. ಲಿಥುವೇನಿಯಾದ ಸಮಾಜ ಶಾಸ್ತ್ರ ಸಂಸ್ಥೆಯ ಪ್ರಧಾನ ಪ್ರವಾಸೋದ್ಯಮ ಸಂಶೋಧಕ ಡಾ. ಡೇರಿಯಸ್ ಲಿಯುಟಿಕಾಸ್ ಅವರು ಪವಿತ್ರ ಸ್ಥಳಗಳು ಮತ್ತು ತೀರ್ಥಯಾತ್ರಾ ಪ್ರವಾಸೋದ್ಯಮದ ಮಹತ್ವವನ್ನು ವಿವರಿಸಿದರೆ, ಮಾರಿಷಸ್‌ನ ತಂತ್ರಜ್ಞಾನ ವಿಶ್ವವಿದ್ಯಾಲಯದ ಸಹ ಪ್ರಾಧ್ಯಾಪಕಿ ಡಾ. ಪೆರುಂಜೋಡಿ ನಾಯ್ಡು ಅವರು ಆಹಾರ ಸಂಸ್ಕೃತಿ ಮತ್ತು ತೀರ್ಥಯಾತ್ರೆಯ ಅನುಭವಗಳ ನಡುವಿನ ಸಂಬಂಧ ಕುರಿತು ಉಪನ್ಯಾಸ ನೀಡಿದರು.

ಸಮ್ಮೇಳನದಲ್ಲಿ ''ದೇವಾಲಯ ಆರ್ಥಿಕತೆ ಮತ್ತು ಸುಸ್ಥಿರ ಅಭಿವೃದ್ಧಿ'' ಹಾಗೂ ''ದೇವಾಲಯ ಆಧಾರಿತ ಸುಸ್ಥಿರ ಪ್ರವಾಸೋದ್ಯಮ ಅಭಿವೃದ್ಧಿ'' ವಿಷಯಗಳ ಕುರಿತು ವಿಶೇಷ ಚರ್ಚಾಗೋಷ್ಠಿಗಳು ನಡೆದವು. ದೇಶದ ವಿವಿಧ ವಿಶ್ವವಿದ್ಯಾಲಯಗಳ ತಜ್ಞರು, ಸಂಶೋಧಕರು ಹಾಗೂ ನೀತಿ ಪರಿಣಿತರು ತಮ್ಮ ಅಭಿಪ್ರಾಯಗಳನ್ನು ಮಂಡಿಸಿದರು. ಕಾರ್ಯಕ್ರಮದಲ್ಲಿ ಸ್ವದೇಶಿ ಶೋಧ ಸಂಸ್ಥಾನದ ಅಧ್ಯಕ್ಷ ಆರ್. ಸುಂದರಂ, ಸಂಸ್ಕೃತಿ ಅಧ್ಯಯನ ಕೇಂದ್ರ ಪ್ರತಿಷ್ಠಾನದ ನಿರ್ದೇಶಕ ಡಾ. ಉದಯ್ ಚೌಧರಿ, ಲೇಖಕ ಡಾ. ಸಂದೀಪ್ ಸಿಂಗ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಸಮ್ಮೇಳನದ ಅಧ್ಯಕ್ಷತೆಯನ್ನು ವಾಣಿಜ್ಯ ಮತ್ತು ನಿರ್ವಹಣಾ ಅಧ್ಯಯನ ನಿಕಾಯದ ಡೀನ್ ಪ್ರೊ. ಪಾಂಡುರಂಗ ವಿ. ವಹಿಸಿದ್ದರು. ಆಗಸ್ಟ್ 7ರವರೆಗೆ ನಡೆಯಲಿರುವ ಈ ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ದೇವಾಲಯ ಆರ್ಥಿಕತೆ, ತೀರ್ಥಯಾತ್ರಾ ಪ್ರವಾಸೋದ್ಯಮ, ಸಾರ್ವಜನಿಕ ನೀತಿ ಹಾಗೂ ಸುಸ್ಥಿರ ಪ್ರಾದೇಶಿಕ ಅಭಿವೃದ್ಧಿ ಕುರಿತ ಸಂಶೋಧನಾ ಪ್ರಬಂಧಗಳನ್ನು ಮಂಡಿಸಲಾಗುತ್ತದೆ.

ಸ್ವಾತಂತ್ರ್ಯ ದಿನಾಚರಣೆ ಅದ್ದೂರಿಯಾಗಿ ಆಚರಿಸಲು ಸಿದ್ಧತೆ ಕೈಗೊಳ್ಳಿ : ಡಿಸಿ ಶಿಲ್ಪಾ ಶರ್ಮಾ



ಬೀದರ್,ಆ.06-

ಆಗಸ್ಟ್ 15ರಂದು ನಡೆಯಲಿರುವ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಅರ್ಥಪೂರ್ಣ ಹಾಗೂ ವೈಭವಯುತವಾಗಿ ಆಚರಿಸಲು ಎಲ್ಲ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಸ್ವಾತಂತ್ರ್ಯ ದಿನಾಚರಣೆ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲ ಸರ್ಕಾರಿ ಶಾಲೆಗಳು, ಕಾಲೇಜುಗಳು ಹಾಗೂ ಸರ್ಕಾರಿ ಕಚೇರಿಗಳಲ್ಲಿ ಬೆಳಿಗ್ಗೆ ಧ್ವಜಾರೋಹಣ ನೆರವೇರಿಸಿ, ಬಳಿಕ ನಗರದ ನೆಹರು ಕ್ರೀಡಾಂಗಣದಲ್ಲಿ ನಡೆಯುವ ಜಿಲ್ಲಾ ಮಟ್ಟದ ಮುಖ್ಯ ಕಾರ್ಯಕ್ರಮದಲ್ಲಿ ಎಲ್ಲ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಕಡ್ಡಾಯವಾಗಿ ಭಾಗವಹಿಸುವಂತೆ ಸೂಚಿಸಿದರು.

ಸರ್ಕಾರದ ಶಿಷ್ಟಾಚಾರವನ್ನು ಕಟ್ಟುನಿಟ್ಟಾಗಿ ಪಾಲಿಸಿ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಆಯೋಜಿಸಬೇಕು. ನಗರದ ಪ್ರಮುಖ ರಸ್ತೆಗಳು ಹಾಗೂ ವೃತ್ತಗಳನ್ನು ಸ್ವಚ್ಛಗೊಳಿಸಿ ದೀಪಾಲಂಕಾರ ಮಾಡಬೇಕು. ಕ್ರೀಡಾಂಗಣದಲ್ಲಿ ಕುಡಿಯುವ ನೀರು, ನೆರಳು, ಅಂಬ್ಯುಲೆನ್ಸ್ ಹಾಗೂ ಅಗ್ನಿಶಾಮಕ ವಾಹನಗಳ ವ್ಯವಸ್ಥೆ ಕಲ್ಪಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸ್ವಾತಂತ್ರ್ಯ ಹೋರಾಟದ ಮಹತ್ವವನ್ನು ಸಾರುವ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ದಿನಾಚರಣೆಯನ್ನು ಅರ್ಥಪೂರ್ಣಗೊಳಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ ಮಾತನಾಡಿ, ಪ್ಲಾಸ್ಟಿಕ್ ರಾಷ್ಟ್ರಧ್ವಜಗಳ ಮಾರಾಟವನ್ನು ಸಂಪೂರ್ಣ ನಿಷೇಧಿಸಲಾಗಿದ್ದು, ನಗರಸಭೆ ಅಧಿಕಾರಿಗಳು ಕಟ್ಟುನಿಟ್ಟಿನ ಪರಿಶೀಲನೆ ನಡೆಸಬೇಕು ಎಂದರು.

ಎಲ್ಲ ಗ್ರಾಮ ಪಂಚಾಯಿತಿಗಳು ಹಾಗೂ ತಾಲೂಕು ಪಂಚಾಯಿತಿ ಕಚೇರಿಗಳಲ್ಲಿ ಕಡ್ಡಾಯವಾಗಿ ಧ್ವಜಾರೋಹಣ ನೆರವೇರಿಸಿ, ವಿಶೇಷ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಬೇಕು. ಸಾರ್ವಜನಿಕರಲ್ಲಿ ರಾಷ್ಟ್ರಧ್ವಜದ ಗೌರವ ಹಾಗೂ ಪ್ಲಾಸ್ಟಿಕ್ ಮುಕ್ತ ಧ್ವಜ ಬಳಕೆಯ ಕುರಿತು ಜಾಗೃತಿ ಮೂಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಮಹಾನಗರ ಪಾಲಿಕೆಯ ಆಯುಕ್ತ ಮುಕುಲ್ ಜೈನ್, ಅಪರ ಜಿಲ್ಲಾಧಿಕಾರಿ ಶಿವನಾಂದ್ ಕರಾಳೆ ಹಾಗೂ ಸಹಾಯಕ ಆಯುಕ್ತ ಮಹಮ್ಮದ್ ಶಕೀಲ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಹಸೀಲ್ದಾರರು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



ಕೆಎಸ್‌ಆರ್‌ಟಿಸಿ ಸಿಬ್ಬಂದಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ

ವಿಜಯನಗರ, ಆ.5:-

ವಿಜಯನಗರ ವಿಭಾಗೀಯ ಕಚೇರಿ, ವಿಭಾಗೀಯ ಕಾರ್ಯಗಾರ ಹಾಗೂ ಹೊಸಪೇಟೆ ಘಟಕದ ಅಧಿಕಾರಿಗಳು ಮತ್ತು ಸಿಬ್ಬಂದಿಯ ಆರೋಗ್ಯ ಹಿತದೃಷ್ಟಿಯಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಮಂಗಳವಾರ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಯಿತು.

ಶಿಬಿರದಲ್ಲಿ ಸಿಬ್ಬಂದಿಯ ರಕ್ತದೊತ್ತಡ, ಮಧುಮೇಹ ಸೇರಿದಂತೆ ವಿವಿಧ ಆರೋಗ್ಯ ತಪಾಸಣೆಗಳನ್ನು ನಡೆಸಿ, ವೈದ್ಯರು ಅಗತ್ಯ ವೈದ್ಯಕೀಯ ಸಲಹೆಗಳನ್ನು ನೀಡಿದರು. ಆರೋಗ್ಯ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚುವುದು ಹಾಗೂ ಸಿಬ್ಬಂದಿಯಲ್ಲಿ ಆರೋಗ್ಯ ಜಾಗೃತಿ ಮೂಡಿಸುವ ಉದ್ದೇಶದಿಂದ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ, ವಿಭಾಗೀಯ ತಾಂತ್ರಿಕ ಶಿಲ್ಪಿ, ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ, ಉಗ್ರಾಣ ಅಧಿಕಾರಿ ಸೇರಿದಂತೆ ವಿವಿಧ ವಿಭಾಗಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಆರೋಗ್ಯ ತಪಾಸಣೆ ಮಾಡಿಸಿಕೊಂಡರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೈದ್ಯರಾದ ಡಾ. ಭೋಜ್ ರಾಜ್ ಸಿಬ್ಬಂದಿಯ ಆರೋಗ್ಯ ತಪಾಸಣೆ ನಡೆಸಿ, ಆರೋಗ್ಯಕರ ಜೀವನಶೈಲಿ, ಸಮತೋಲಿತ ಆಹಾರ ಸೇವನೆ, ನಿಯಮಿತ ವ್ಯಾಯಾಮ ಹಾಗೂ ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮಹತ್ವದ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ವಿಭಾಗೀಯ ಕಚೇರಿ, ವಿಭಾಗೀಯ ಕಾರ್ಯಗಾರ, ಹೊಸಪೇಟೆ ಘಟಕದ ಅಧಿಕಾರಿಗಳು, ಸಿಬ್ಬಂದಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಸಂಸತ್ತಿಗೆ ಬರದೆ, ಉತ್ತರಿಸದೆ ಗೃಹ ಸಚಿವ ಅಮಿತ್ ಶಾ ಅಡಗಿಕೊಂಡಿರುವುದೇಕೆ?

ಭಾರತದ ಸಂಸದೀಯ ಪ್ರಜಾಪ್ರಭುತ್ವದಲ್ಲಿ ಪ್ರತಿಯೊಬ್ಬ ಸಚಿವರೂ ಸಂಸತ್ತಿಗೆ ಉತ್ತರದಾಯಿಯಾಗಿರಬೇಕು. ಆದರೆ, ಮುಂಗಾರು ಅಧಿವೇಶನ ಆರಂಭವಾಗಿ ಹದಿನೈದು ದಿನಗಳಾದರೂ ಘನತೆವೆತ್ತ ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಕಲಾಪಕ್ಕೆ ಹಾಜರಾಗಿಲ್ಲ, ಉತ್ತರಿಸಿಲ್ಲ. ಪ್ರಶ್ನೆಗಳಿಗೆ ಹೆದರಿ ಅಡಗಿಕೊಳ್ಳುವುದು ಹೇಡಿಗಳ ಕೆಲಸವಲ್ಲವೇ?

ನೀಟ್ ಪರೀಕ್ಷೆ ಅಕ್ರಮ ಖಂಡಿಸಿ ಪ್ರತಿಭಟಿಸಿದ ವಿದ್ಯಾರ್ಥಿಗಳ ಮೇಲೆ ಪೊಲೀಸರು ನಡೆಸಿದ ಪೆಲೆಟ್ ಗನ್ ದಾಳಿ ಹಾಗೂ ಅಯೋಧ್ಯಾ ರಾಮಮಂದಿರದ ಹುಂಡಿ ಕಳವು ಆರೋಪಕ್ಕೆ ಸಂಬಂಧಿಸಿದಂತೆ ಗೃಹ ಸಚಿವ ಅಮಿತ್ ಶಾ ಅವರು ಸದನದಲ್ಲಿ ಸ್ಪಷ್ಟನೆ ನೀಡಬೇಕು ಮತ್ತು ರಾಜೀನಾಮೆ ಕೊಡಬೇಕು ಎಂದು ಒತ್ತಾಯಿಸಿ ವಿಪಕ್ಷಗಳು ಸಂಸತ್ ಭವನದ ಒಳಗೆ ಮತ್ತು ಹೊರಗೆ ಪ್ರತಿಭಟನೆ ಹಮ್ಮಿಕೊಂಡಿವೆ.

ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ತಕ್ಷಣವೇ ಸಂಸತ್ತಿಗೆ ಆಗಮಿಸಿ ಈ ಬಗ್ಗೆ ಸ್ಪಷ್ಟನೆ ನೀಡಬೇಕು, ಚರ್ಚೆಗೆ ನಾವು ಸಿದ್ಧ ಎಂದು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆಗ್ರಹಿಸಿದರೆ; ವಿದ್ಯಾರ್ಥಿಗಳ ಮೇಲೆ ದೌರ್ಜನ್ಯ ನಡೆಸಿರುವ ಅಪರಾಧಿಪ್ರಜ್ಞೆಯಿಂದಲೇ ಅವರು ಮುಖ ಮುಚ್ಚಿಕೊಂಡು ಓಡಾಡುತ್ತಿದ್ದಾರೆ ಎಂದು ಲೋಕಸಭೆ ನಾಯಕ ರಾಹುಲ್ ಗಾಂಧಿ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಹೌದು, ಪ್ರತಿಪಕ್ಷಗಳ ನಾಯಕರ ಆರೋಪದಲ್ಲಿ ಹುರುಳಿದೆ. ಮುಂಗಾರು ಅಧಿವೇಶನ ಆರಂಭವಾಗಿ ಹದಿನೈದು ದಿನಗಳಾದರೂ ಘನತೆವೆತ್ತ ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಕಲಾಪಕ್ಕೆ ಹಾಜರಾಗದೆ, ಉತ್ತರಿಸದೆ ಇರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ.

ಭಾರತದ ಸಂಸದೀಯ ಪ್ರಜಾಪ್ರಭುತ್ವದಲ್ಲಿ ಪ್ರತಿಯೊಬ್ಬ ಸಚಿವರೂ ಸಂಸತ್ತಿಗೆ ಉತ್ತರದಾಯಿಯಾಗಿರಬೇಕು. ತಮ್ಮ ಇಲಾಖೆಗೆ ಸಂಬಂಧಿಸಿದ ನೀತಿ-ನಿರ್ಧಾರಗಳ ಬಗ್ಗೆ ಸಂಸದರು ಕೇಳುವ ಪ್ರಶ್ನೆಗಳಿಗೆ ಉತ್ತರಿಸಬೇಕು. ಅದು ಅವರ ಸಾಂವಿಧಾನಿಕ ಹೊಣೆಗಾರಿಕೆ. ಅದು ಪ್ರಜಾಪ್ರಭುತ್ವದ ಆರೋಗ್ಯಕರ ಕಾರ್ಯನಿರ್ವಹಣೆಗೆ ಅತ್ಯಗತ್ಯ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಸಂಸತ್ತಿನಲ್ಲಿ ಪ್ರತಿಪಕ್ಷಗಳ ಪ್ರಶ್ನೆಗಳಿಗೆ ನೇರವಾಗಿ ಉತ್ತರಿಸದೆ ಇರುವುದು ಹಾಗೂ ಚರ್ಚೆಗಳಿಂದ ದೂರ ಉಳಿದಿರುವುದು ಇದೇ ಮೊದಲೇನೂ ಅಲ್ಲ. ಕಳೆದ ಹನ್ನೆರಡು ವರ್ಷಗಳಲ್ಲಿ ದೇಶ ಎದುರಿಸಿದ ಹಲವು ಗಂಭೀರ ಸಮಸ್ಯೆಗಳಿಗೆ, ದೇಶದ ಜನ ಬಯಸುವ ಪ್ರಶ್ನೆಗಳಿಗೆ ಉತ್ತರಿಸದ ಹಲವಾರು ಉದಾಹರಣೆಗಳಿವೆ. ಅವು ರಾಜಕೀಯ ವಿವಾದಗಳಾಗಿವೆ, ಕೇಂದ್ರ ಗೃಹ ಇಲಾಖೆಗೆ ಕಪ್ಪು ಮಸಿ ಬಳಿದಿವೆ.

ಅಮಿತ್ ಶಾ ಗೃಹ ಸಚಿವರಾಗುತ್ತಿದ್ದಂತೆ, 2019ರಲ್ಲಿ ಪುಲ್ವಾಮಾದಲ್ಲಿ ಭಾರತೀಯ ಸೇನೆಯ ಭದ್ರತಾ ಪಡೆಗಳ ಮೇಲೆ ನಡೆದ ಅತ್ಯಂತ ಭೀಕರ ದಾಳಿಯಲ್ಲಿ 40 ಮಂದಿ ಸಿಆರ್‌ಪಿಎಫ್ ಯೋಧರು ಹುತಾತ್ಮರಾದರು. ಇದು ರಾಷ್ಟ್ರೀಯ ಭದ್ರತೆಯ ವಿಚಾರ, ಆದರೆ ಗೃಹ ಸಚಿವರಿಂದ ಸಮಂಜಸವಾದ ಉತ್ತರ ಬರಲಿಲ್ಲ. 2020ರಲ್ಲಿ ನಡೆದ ದೆಹಲಿ ಗಲಭೆ ತಡೆಯಲು ಏಕೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಿಲ್ಲ, ಪೊಲೀಸ್ ಇಲಾಖೆಯ ಕಾರ್ಯವೈಖರಿ ಹೇಗಿತ್ತು ಎಂಬ ಪ್ರಶ್ನೆಗಳಿಗೆ ಸ್ಪಷ್ಟ ಉತ್ತರ ನೀಡಲಿಲ್ಲ. 2021ರಲ್ಲಿ ರಾಷ್ಟ್ರೀಯ ಭದ್ರತೆಯ ವಿಚಾರಕ್ಕೆ ಸಂಬಂಧಿಸಿದಂತೆ ಪೆಗಾಸಸ್ ಸ್ಪೈವೇರ್ ಬಳಕೆಯ ಆರೋಪಗಳ ಕುರಿತು ಗೃಹ ಸಚಿವಾಲಯ ಸೊಲ್ಲೆತ್ತಲಿಲ್ಲ. 2023ರಿಂದ ಇಲ್ಲಿಯವರೆಗೆ ಮಣಿಪುರದಲ್ಲಿ ನಡೆಯುತ್ತಿರುವ ಹಿಂಸಾಚಾರದ ಬಗ್ಗೆ ಸಂಸತ್ತಿನಲ್ಲಿ ದೀರ್ಘ ಚರ್ಚೆಗೆ ಪ್ರತಿಪಕ್ಷಗಳು ಒತ್ತಾಯಿಸುತ್ತಲೇ ಬಂದಿವೆ. ಆದರೆ ಡಬಲ್ ಎಂಜಿನ್ ಸರ್ಕಾರಗಳ ಹೊಣೆಗಾರಿಕೆ ಮತ್ತು ಹಿಂಸಾಚಾರ ನಿಯಂತ್ರಣದಲ್ಲಿನ ನಿರ್ಲಕ್ಷ್ಯ ಕುರಿತು ಉತ್ತರವೇ ಇಲ್ಲ. 2025ರಲ್ಲಿ ಪೆಹಲ್ಗಾಮ್ ದಾಳಿಯಿಂದಾಗಿ ದೇಶದ 26 ಜನ ಅಮಾಯಕರು ಪ್ರಾಣತೆತ್ತರು. ಇದು ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯ ಎಂದು ಇಡೀ ದೇಶವೇ ಕೂಗಿ ಹೇಳಿತು. ಆದರೆ ಕೇಂದ್ರ ಗೃಹ ಸಚಿವ ಅಮಿತ್ ಶಾ, ಇದಕ್ಕೂ ಉತ್ತರಿಸಲಿಲ್ಲ.

ಈಗ ಅಮಾಯಕ ವಿದ್ಯಾರ್ಥಿಗಳ ಮೇಲೆ ಪೆಲೆಟ್ ಗನ್ ದಾಳಿಗೆ ಆದೇಶಿಸಿದವರು ಯಾರು ಹಾಗೂ ಅಯೋಧ್ಯಾ ರಾಮಮಂದಿರದಲ್ಲಿ ಹುಂಡಿ ಕಳವು ಮಾಡಿದವರ ಮೇಲೆ ಏನು ಕ್ರಮ ಕೈಗೊಂಡಿದ್ದೀರಿ ಎಂದು ಪ್ರತಿಪಕ್ಷಗಳು ಪ್ರಶ್ನೆ ಕೇಳುತ್ತಿವೆ. ಉತ್ತರಿಸಬೇಕಾದ ಗೃಹ ಸಚಿವ ಅಮಿತ್ ಶಾ ಸಂಸತ್ತಿಗೆ ಬರದೆ ತಪ್ಪಿಸಿಕೊಂಡಿದ್ದಾರೆ. ಅಧಿವೇಶನದ ಕಲಾಪಗಳಲ್ಲಿ ಭಾಗಿಯಾಗದೆ ಜವಾಬ್ದಾರಿಯಿಂದ ನುಣುಚಿಕೊಂಡಿದ್ದಾರೆ.

ಪ್ರತಿಪಕ್ಷಗಳನ್ನು ಧೈರ್ಯವಾಗಿ ಎದುರಿಸುವುದು, ಪ್ರಶ್ನೆಗಳಿಗೆ ಉತ್ತರಿಸುವುದು, ಸಮಸ್ಯೆಗಳಿಗೆ ಸೂಕ್ತ ಪರಿಹಾರಗಳನ್ನು ಸೂಚಿಸುವುದು ಅಮಿತ್ ಶಾ ಅವರ ಜಾಯಮಾನವೇ ಅಲ್ಲ. ಪ್ರಜಾಸತ್ತಾತ್ಮಕ ರಾಜಕಾರಣ ಅವರದ್ದಲ್ಲ. ಅದಕ್ಕೆ ಅವರು ಬೆಳೆದುಬಂದ ಬಗೆಯನ್ನು ಅವಲೋಕಿಸಿದರೆ, ಅರ್ಥವಾಗದೆ ಇರುವುದಿಲ್ಲ.

ಅರವತ್ತೊಂದರ ಹರೆಯದ ಅಮಿತ್ ಭಾಯಿ ಅನಿಲ್‌ಚಂದ್ರ ಶಾ ಜನಿಸಿದ್ದು ಮುಂಬೈನ ಜೈನ ಕುಟುಂಬದಲ್ಲಿ. ತಂದೆ ಅನಿಲ್ ಚಂದ್ ಶಾ ಪಿವಿಸಿ ಪೈಪ್ ವ್ಯಾಪಾರಸ್ಥ. ಇವರ ಮಗನಾದ ಅಮಿತ್, ಜೀವ ರಸಾಯನ ಶಾಸ್ತ್ರ ಪದವೀಧರ. ಶೇರು ದಳ್ಳಾಳಿಯಾಗಿ, ಗುಜರಾತ್‌ನ ಹಣಕಾಸು ಸಂಸ್ಥೆಯ ಅಧ್ಯಕ್ಷರಾಗಿ ಕೆಲಸ ಮಾಡಿದ ಅನುಭವ ಹೊಂದಿದವರು. ಚಿಕ್ಕಂದಿನಿಂದಲೇ ರಾಷ್ಟ್ರೀಯ ಸ್ವಯಂ ಸೇವಕ ಸಂಘ(ಆರೆಸ್ಸೆಸ್)ದೊಂದಿಗೆ ಗುರುತಿಸಿಕೊಂಡಿದ್ದ ಅಮಿತ್ ಶಾ, ಕಾಲೇಜು ದಿನಗಳಲ್ಲಿ ಎಬಿವಿಪಿಯ ಮುಖ್ಯಸ್ಥರಾಗಿ ಕೆಲಸ ಮಾಡಿದ್ದರು. 1982ರಲ್ಲಿ ಮೊದಲ ಬಾರಿಗೆ ಮೋದಿಯನ್ನು ಭೇಟಿ ಮಾಡಿದ್ದು ಕೂಡ ಆರೆಸ್ಸೆಸ್ ಅಂಗಳದಲ್ಲಿಯೇ. 1986ರಲ್ಲಿ ಅಧಿಕೃತವಾಗಿ ಬಿಜೆಪಿಗೆ ಸೇರ್ಪಡೆಗೊಂಡರು. 1997ರಲ್ಲಿ ಸರ್ಖೇಜ್ ವಿಧಾನಸಭಾ ಕ್ಷೇತ್ರಕ್ಕೆ ನಡೆದ ಉಪಚುನಾವಣೆಯಲ್ಲಿ ಸ್ಪರ್ಧಿಸಿ ಗೆಲ್ಲುವ ಮೂಲಕ, ಕ್ಷೇತ್ರವನ್ನು ಹಿಡಿತಕ್ಕೆ ತೆಗೆದುಕೊಂಡ ಅಮಿತ್ ಶಾ ಸತತವಾಗಿ ನಾಲ್ಕು ಬಾರಿ ಗೆದ್ದರು.

ಆದರೆ ಅಮಿತ್ ಶಾ ರಾಜಕೀಯ ಬದುಕಿನ ಭವಿಷ್ಯ ರೂಪುಗೊಂಡಿದ್ದು, ಅದು ಇಡೀ ದೇಶಕ್ಕೆ ಮತ್ತು ಪ್ರಪಂಚಕ್ಕೆ ಪರಿಚಯವಾಗಿದ್ದು 2002ರ ಗುಜರಾತ್ ನರಮೇಧದಲ್ಲಿ. ಚಿಕ್ಕವಯಸ್ಸಿನಲ್ಲಿಯೇ ಗುಜರಾತ್ ಮುಖ್ಯಮಂತ್ರಿ ನರೇಂದ್ರ ಮೋದಿ ಸಚಿವ ಸಂಪುಟದಲ್ಲಿ ಗೃಹ ಖಾತೆಯೂ ಸೇರಿದಂತೆ 10 ಖಾತೆಗಳನ್ನು ನಿರ್ವಹಿಸುವ ಸಚಿವರಾದರು. ಅದರಲ್ಲೂ ಸೊಹ್ರಾಬುದ್ದೀನ್, ಇಶ್ರತ್ ಜಹಾನ್, ಹರೇನ್ ಪಾಂಡ್ಯರ ನಕಲಿ ಎನ್‌ಕೌಂಟರ್ ಪ್ರಕರಣ ಹಾಗೂ ರಾಜ್ಯ ಪೊಲೀಸರಿಗೆ ಆದೇಶ ನೀಡಿ ಹಲವಾರು ಜನರನ್ನು ಕೊಲ್ಲಿಸಲು ಕಾರಣರಾದರೆಂಬ ಆಪಾದನೆಗೆ ಗುರಿಯಾದರು. ಹಲವಾರು ಕೇಸುಗಳು ಮೈ ಮೆತ್ತಿಕೊಂಡವು. ಅಷ್ಟೇ ಅಲ್ಲ, ಸಿಬಿಐ ತನಿಖೆ ಕೈಗೆತ್ತಿಕೊಂಡು ಅಮಿತ್ ಶಾರನ್ನು ಮುಖ್ಯ ಆರೋಪಿಯನ್ನಾಗಿಸಿ ಜುಲೈ 25, 2010ರಂದು ಬಂಧಿಸಿ, ಮೂರು ತಿಂಗಳ ಕಾಲ ಜೈಲಿಗೂ ಅಟ್ಟಿತ್ತು.

2010ರಲ್ಲಿ ಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ ಗುಜರಾತ್ ಬಿಟ್ಟ ಅಮಿತ್ ಶಾ ಮತ್ತೆ ಮರಳಿದ್ದು 2012ರಲ್ಲಿ, ಗುಜರಾತ್ ಹೈಕೋರ್ಟ್ ಜಾಮೀನು ನೀಡಿದ ಮೇಲೆ. 2012ರ ಡಿಸೆಂಬರ್‌ನಲ್ಲಿ ನಡೆದ ಚುನಾವಣೆಯಲ್ಲಿ ಸ್ಪರ್ಧಿಸಿ ಮತ್ತೆ ಗೆಲ್ಲುವ ಮೂಲಕ ದೇಶದ ರಾಜಕಾರಣದ ದಿಕ್ಕನ್ನೇ ಬದಲಿಸಿಬಿಟ್ಟರು. ಇಲ್ಲಿಂದ ಅಮಿತ್ ಶಾರ ಹೊಸ ರಾಜಕಾರಣ, ಅಂದರೆ ಈ ದೇಶದ ಜನತೆ ಇಲ್ಲಿಯವರೆಗೆ ಕಂಡು ಕೇಳದ ಕುಟಿಲ ತಂತ್ರಗಾರಿಕೆಯ ರಾಜಕಾರಣ ಚಾಲ್ತಿಗೆ ಬಂತು.

2014ರಲ್ಲಿ ದೇಶದ ಹೊಸ ರಾಜಕಾರಣದ ಮುಂದಾಳತ್ವವನ್ನು ನರೇಂದ್ರ ಮೋದಿ ವಹಿಸಿಕೊಂಡರೆ, ಅವರ ಹಿಂದಿನ ಚಾಲಕ ಶಕ್ತಿಯಾಗಿ ಅಮಿತ್ ಶಾ ನಿಯೋಜಿತರಾದರು. ಆಕರ್ಷಕ ವಾಗ್ಮಿಯಲ್ಲದ ಶಾ, ತಂತ್ರ-ಕುತಂತ್ರಗಳನ್ನು ಹೆಣೆಯುವುದರಲ್ಲಿ ನಿಸ್ಸೀಮರು. ಇಂತಹ ವ್ಯಕ್ತಿಯನ್ನು ನರೇಂದ್ರ ಮೋದಿಯವರು 2019ರಲ್ಲಿ ದೇಶದ ಗೃಹ ಮಂತ್ರಿಯನ್ನಾಗಿ ಮಾಡಿದರು. ಆ ಸ್ಥಾನಕ್ಕೆ ಬೇಕಾದ ಹಿರಿತನ, ಅನುಭವ, ಯೋಗ್ಯತೆ, ಅರ್ಹತೆ, ನಾಯಕತ್ವ, ವಾಕ್ಚಾತುರ್ಯಗಳೆಂಬ ಗುಣಗಳು ಗೌಣವಾಗಿ; ಆ ಜಾಗವನ್ನು ವಿವಾದ, ತಂತ್ರಗಾರಿಕೆ, ನಿರ್ವಹಣೆ, ನಿಭಾವಣೆ, ಭಂಡತನ, ಕಿಲಾಡಿತನಗಳು ಆಕ್ರಮಿಸಿಕೊಂಡಿವೆ. ಒಬ್ಬ ವ್ಯಕ್ತಿ ಹೀಗೂ ರಾಜಕೀಯ ರಂಗದಲ್ಲಿ ಪ್ರವರ್ಧಮಾನಕ್ಕೆ ಬರಬಹುದು, ಒಂದು ದೇಶದ ಗೃಹ ಖಾತೆಯಂತಹ ಜವಾಬ್ದಾರಿಯುತ ಸ್ಥಾನವನ್ನು ಅಲಂಕರಿಸಬಹುದು ಎಂಬುದಕ್ಕೆ ಬಿಜೆಪಿಯೇ ಸಾಕ್ಷಿಯಾಗಿದೆ.

ಇಂತಹ ಬಿಜೆಪಿಯನ್ನು, ಬಿಜೆಪಿಯ ಭಾಗವಾಗಿರುವ ಅಮಿತ್ ಶಾ ಅವರನ್ನು ದೇಶದ ರಾಜಕಾರಣದಿಂದ ಮುಕ್ತಗೊಳಿಸುವ ಕಾಲ ಈಗ ಸನ್ನಿಹಿತವಾಗಿದೆ. ಅದಕ್ಕೆ ತಕ್ಕಂತೆ ದೇಶದ ಯುವಜನತೆ ಎಚ್ಚೆತ್ತಿದೆ, ಪ್ರಶ್ನಿಸುತ್ತಿದೆ. ಅದರ ಫಲವಾಗಿ ಧರ್ಮೇಂದ್ರ ಪ್ರಧಾನ್‌ರನ್ನು ಕುರ್ಚಿಯಿಂದ ಕೆಳಗಿಳಿಸಲಾಗಿದೆ. ಇದು ನಿಜಕ್ಕೂ ಅಮಿತ್ ಶಾರಲ್ಲಿ ನಡುಕ ಹುಟ್ಟಿಸಿದೆ, ಅಡಗಿಕೊಳ್ಳುವಂತೆ ಮಾಡಿದೆ. ಪ್ರಶ್ನೆಗಳಿಗೆ ಹೆದರಿ ಅಡಗಿಕೊಳ್ಳುವುದು ಹೇಡಿಗಳ ಕೆಲಸ, ಅಂತಹ ಗೃಹ ಸಚಿವರನ್ನು ಪಡೆದ ಭಾರತ ಧನ್ಯ!

ಎಲ್‌ಐಸಿ ಖಾಸಗೀಕರಣಗೊಳಿಸಲು ಮೋದಿ ಸರ್ಕಾರ ಹುನ್ನಾರ; 31 ಸಾವಿರ ಕೋಟಿಗೆ ಸಂಸ್ಥೆಯ ಶೇ 6.5 ಪಾಲು ಮಾರಾಟ



''ದೇಶವನ್ನು ಮಾರಲು ಬಿಡುವುದಿಲ್ಲ'' ಎಂಬ ಮೋದಿಯವರ ಘೋಷಣೆಯು ಈ ಶತಮಾನದ ಅತಿ ದೊಡ್ಡ ಭರವಸೆಯ ವಂಚನೆ. ಕೇವಲ 5 ಕೋಟಿ ರೂಪಾಯಿಯಿಂದ ಬೆಳೆದು 2.75 ಲಕ್ಷ ಕೋಟಿಯ ಸ್ವಂತ ಮೌಲ್ಯವಿರುವ ಭವ್ಯ ಸಂಸ್ಥೆಯ ಶೇ. 6.5ರಷ್ಟು ಪಾಲನ್ನು ಮಾರಿ 31 ಸಾವಿರ ಕೋಟಿ ಜೇಬಿಗಿಳಿಸಿಕೊಂಡಿದೆ. ಭಾರತ್ ಬೇಚೋ ಕೇವಲ ವಿಪಕ್ಷಗಳ ಆರೋಪವಲ್ಲ, ಅದು ಮೋದಿ ಸರ್ಕಾರದ ಆಡಳಿತದಲ್ಲಿ ದೇಶ ಅನುಭವಿಸುತ್ತಿರುವ ಆರ್ಥಿಕ ವಿನಾಶದ ಕಟು ವಾಸ್ತವ

2014ರ ಮಹಾ ಚುನಾವಣೆಯ ಪ್ರಚಾರದ ಕಾವು ತಾರಕಕ್ಕೇರಿದ್ದಾಗ, ''ಈ ಪವಿತ್ರ ಭಾರತದ ಮಣ್ಣಿನ ಆಣೆಯಿಟ್ಟು ಹೇಳುತ್ತೇನೆ, ನಾನು ಈ ದೇಶವನ್ನು ಮಾರಲು ಬಿಡುವುದಿಲ್ಲ'' ಎಂದು ನರೇಂದ್ರ ಮೋದಿಯವರು ಭಾವುಕರಾಗಿ ನುಡಿದಿದ್ದ ಮಾತುಗಳು ದೇಶದ ಜನತೆಯಲ್ಲಿ ಭಾರೀ ಭರವಸೆ ಮೂಡಿಸಿದ್ದವು. ಆದರೆ, ಅಧಿಕಾರದ ಗದ್ದುಗೆಗೇರಿ ದಶಕ ಕಳೆಯುವಷ್ಟರಲ್ಲಿ ಆ ಮಾತುಗಳು ಅಪ್ಪಟ ಸುಳ್ಳು ಮತ್ತು ಜನವಂಚನೆಯ ಪ್ರತೀಕವಾಗಿ ನಿಂತಿವೆ. ಕೇಂದ್ರ ಸರ್ಕಾರವು ಸಾರ್ವಜನಿಕ ವಲಯದ ಬೃಹತ್ ಆಸ್ತಿಗಳನ್ನು ಹರಾಜು ಹಾಕುವ ಏಕೈಕ ಅಜೆಂಡಾವನ್ನು ನಿರಂತರವಾಗಿ ಜಾರಿಗೆ ತರುತ್ತಿದೆ. ಇದು ಕೇವಲ ಆಡಳಿತಾತ್ಮಕ ನೀತಿಯಲ್ಲ, ಬದಲಾಗಿ ವಿರೋಧ ಪಕ್ಷಗಳು ಕರೆಯುವಂತೆ ಭಾರತ್ ಬೇಚೋ (ಭಾರತ ಮಾರಾಟ) ಎಂಬ ಬೃಹತ್ ವಿನಾಶಕಾರಿ ಅಭಿಯಾನವಾಗಿದೆ.

ಸರ್ಕಾರದ ಬೊಕ್ಕಸ ತುಂಬಿಸುವ ಮತ್ತು ಆರ್ಥಿಕ ಸುಧಾರಣೆಯ ಸುಳ್ಳು ನೆಪದಲ್ಲಿ, ದಶಕಗಳಿಂದ ಕಟ್ಟಿಬೆಳೆಸಿದ ಲಾಭದಾಯಕ ಸಾರ್ವಜನಿಕ ಉದ್ದಿಮೆಗಳನ್ನು ಬೆರಳೆಣಿಕೆಯಷ್ಟು ಕಾರ್ಪೊರೇಟ್ ಕುಳಗಳ ಮಡಿಲಿಗೆ ಹಾಕುವ ಕಾರ್ಯ ಎಗ್ಗಿಲ್ಲದೆ ಸಾಗಿದೆ. ದೇಶದ ಆಯಕಟ್ಟಿನ ವಿಮಾನ ನಿಲ್ದಾಣಗಳು, ಅತಿ ದೊಡ್ಡ ಬಂದರುಗಳು, ಟೆಲಿಕಾಂ, ಕಲ್ಲಿದ್ದಲು ಗಣಿಗಳು ಮತ್ತು ಜೀವನಾಡಿಯಾದ ರೈಲ್ವೆಯಂತಹ ಬೃಹತ್ ಜಾಲಗಳನ್ನು ಈಗಾಗಲೇ ಖಾಸಗಿ ಒಡೆಯರ ಕೈಗೊಪ್ಪಿಸಲಾಗಿದೆ. ಒಂದು ಕಡೆ ಮಂತ್ರಮುಗ್ಧರನ್ನಾಗಿಸುವ ರಾಷ್ಟ್ರೀಯತೆಯ ಭಾಷಣಗಳನ್ನು ಬಿಗಿಯುತ್ತಲೇ, ಮತ್ತೊಂದೆಡೆ ದೇಶದ ಬೆನ್ನೆಲುಬಾಗಿರುವ ಕೈಗಾರಿಕೆಗಳನ್ನು ಬಿಡಿಗಾಸಿಗೆ ಮಾರಾಟ ಮಾಡುತ್ತಿರುವ ಮೋದಿ ಸರ್ಕಾರದ ದ್ವಿಮುಖ ನೀತಿಯು ಆರ್ಥಿಕತೆಗೆ ಮಾರಕವಾಗಿ ಪರಿಣಮಿಸಿದೆ.

ಈ ಸಾರ್ವಜನಿಕ ಆಸ್ತಿಗಳ ಮಾರಾಟದ ಸರಣಿಯಲ್ಲಿ ಇದೀಗ ಕೋಟ್ಯಂತರ ಭಾರತೀಯರ ಜೀವನಾಡಿಯಾದ ಭಾರತೀಯ ಜೀವ ವಿಮಾ ನಿಗಮವನ್ನು (ಎಲ್.ಐ.ಸಿ) ಕೂಡ ಸಂಪೂರ್ಣವಾಗಿ ಮಾರಲು ಮೋದಿ ಸರ್ಕಾರ ಹೊರಟಿದೆ. ಭಾರತದ ಮಟ್ಟಿಗೆ ಎಲ್.ಐ.ಸಿ ಎಂದರೆ ಅದೊಂದು ಕೇವಲ ವಿಮಾ ಕಂಪನಿಯಲ್ಲ, ಅದು ಪ್ರತಿಯೊಂದು ಮಧ್ಯಮ ಮತ್ತು ಬಡ ವರ್ಗದ ಕುಟುಂಬದ ಆರ್ಥಿಕ ಭದ್ರತೆಯ ಅಡಿಪಾಯ. ಇಂತಹ ಸೂಕ್ಷ್ಮ ಹಾಗೂ ಕೋಟ್ಯಂತರ ಜನರ ಜೀವಮಾನದ ಉಳಿತಾಯವಿರುವ ಬೃಹತ್ ಸಂಸ್ಥೆಯನ್ನೂ ಮಾರುಕಟ್ಟೆಯ ಜೂಜಾಟಕ್ಕೆ ದೂಡಲು ಹೊರಟಿರುವುದು ಮೋದಿ ಸರ್ಕಾರದ ಆರ್ಥಿಕ ದಿವಾಳಿತನವನ್ನು ಎತ್ತಿ ತೋರಿಸುತ್ತದೆ.

ದೇಶದ ಸಾಮಾನ್ಯ ಜನರಿಗೆ ಆರ್ಥಿಕ ಭದ್ರತೆ ನೀಡುವ ಸದುದ್ದೇಶದಿಂದ 1956ರಲ್ಲಿ ಅಂದಿನ ಪ್ರಧಾನಿ ಜವಾಹರಲಾಲ್ ನೆಹರೂ ಅವರು ದೇಶದಲ್ಲಿದ್ದ ನೂರಾರು ಖಾಸಗಿ ವಿಮಾ ಕಂಪನಿಗಳನ್ನು ರಾಷ್ಟ್ರೀಕರಣಗೊಳಿಸಿ ಎಲ್.ಐ.ಸಿ.ಯನ್ನು ಸ್ಥಾಪಿಸಿದ್ದರು. ಕೇವಲ 5 ಕೋಟಿ ರೂಪಾಯಿಗಳ ಅಲ್ಪ ಬಂಡವಾಳದೊಂದಿಗೆ ಕಟ್ಟಿದ ಈ ಸರ್ಕಾರಿ ಉದ್ಯಮವು ದಶಕಗಳ ಕಾಲ ಜನಸಾಮಾನ್ಯರ ಕಷ್ಟಕಾಲದ ಆಸರೆಯಾಗಿ ಹೆಮ್ಮರವಾಗಿ ಬೆಳೆಯಿತು. ಆದರೆ, ಇತಿಹಾಸವನ್ನು ದೂಷಿಸುವ ಮತ್ತು ಹಿಂದಿನ ನಾಯಕರು ಕಟ್ಟಿದ್ದನ್ನು ಕೆಡವುವ ಪ್ರವೃತ್ತಿಯನ್ನೇ ಮೈಗೂಡಿಸಿಕೊಂಡಿರುವ ಮೋದಿ ಸರ್ಕಾರಕ್ಕೆ, ನೆಹರೂ ಅವರ ದೂರದೃಷ್ಟಿಯಿಂದ ರೂಪುಗೊಂಡ ಈ ಬೃಹತ್ ಸಂಸ್ಥೆಯನ್ನು ರಕ್ಷಿಸುವ ಯಾವುದೇ ಇಚ್ಛಾಶಕ್ತಿ ಇದ್ದಂತಿಲ್ಲ.

ಎಲ್.ಐ.ಸಿ.ಯ ಮೌಲ್ಯ ಮತ್ತು ಸಾರ್ವಜನಿಕರ ಹಣದ ಲೆಕ್ಕಾಚಾರವನ್ನು ನೋಡಿದರೆ ಇದರ ಬೃಹತ್ ಸ್ವರೂಪ ಅರ್ಥವಾಗುತ್ತದೆ. 1956ರಲ್ಲಿ ಕೇವಲ 5 ಕೋಟಿ ರೂಪಾಯಿಗಳಿಂದ ಶುರುವಾದ ಈ ಸಂಸ್ಥೆ, ಇಂದು ತನ್ನ ಲಾಭದಿಂದಲೇ ಬರೋಬ್ಬರಿ 2.75 ಲಕ್ಷ ಕೋಟಿ ರೂಪಾಯಿಗಳಷ್ಟು ಸ್ವಂತ ಆಸ್ತಿ ( ) ಮಾಡಿಕೊಂಡಿದೆ. ಇದರ ಜೊತೆಗೆ, ಕೋಟ್ಯಂತರ ಭಾರತೀಯರು ತಮ್ಮ ಭವಿಷ್ಯಕ್ಕಾಗಿ ಕಟ್ಟಿರುವ 40 ಲಕ್ಷ ಕೋಟಿ ರೂಪಾಯಿಗಳಿಗೂ ಅಧಿಕ ಬೃಹತ್ ಮೊತ್ತದ ಹಣವನ್ನು (ಒಟ್ಟು ನಿರ್ವಹಣಾ ಆಸ್ತಿ) ಎಲ್.ಐ.ಸಿ. ಅತ್ಯಂತ ಜವಾಬ್ದಾರಿಯುತವಾಗಿ ನಿರ್ವಹಿಸುತ್ತಿದೆ. ಇಂತಹ ಬೃಹತ್ ಮೌಲ್ಯದ ಲಾಭದಾಯಕ ಸಂಸ್ಥೆಯನ್ನು ಸರ್ಕಾರ ಖಾಸಗಿಯವರಿಗೆ ಮಾರಾಟ ಮಾಡಲು ಹೊರಟಿರುವುದು ಸಂಪೂರ್ಣ ವಿಪರ್ಯಾಸ.

ಸದ್ಯ ಮೋದಿ ಸರ್ಕಾರವು ಎಲ್.ಐ.ಸಿ.ಯ ಶೇ. 6.5ರಷ್ಟು ಪಾಲನ್ನು (ಷೇರುಗಳನ್ನು) ಮಾತ್ರ ಮಾರಿ, 31 ಸಾವಿರ ಕೋಟಿ ರೂಪಾಯಿಗಳನ್ನು ಗಳಿಸಿದೆ. ಕೇವಲ ಶೇ. 6.5ರಷ್ಟು ಪಾಲಿಗೆ ಇಷ್ಟು ದೊಡ್ಡ ಮೊತ್ತ ಸಿಗುವುದಾದರೆ, ಇಡೀ ಸಂಸ್ಥೆಯ ನೈಜ ಬೆಲೆ ಎಷ್ಟು ಎಂದು ನೀವೇ ಊಹಿಸಿ. ಆದರೆ ನಿಜವಾದ ಆತಂಕ ಶುರುವಾಗುವುದೇ ಇಲ್ಲಿ; ಈ ಶೇ. 6.5ರಷ್ಟು ಪಾಲು ಮಾರಾಟ ಕೇವಲ ಒಂದು ಆರಂಭವಷ್ಟೇ. ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಇಡೀ ಎಲ್.ಐ.ಸಿ.ಯನ್ನೇ ಕಾರ್ಪೊರೇಟ್ ಕುಳಗಳಿಗೆ ಸಂಪೂರ್ಣವಾಗಿ ಮಾರಲು ಸರ್ಕಾರ ಈಗಲೇ ದಾರಿ ಸಿದ್ಧಮಾಡಿಕೊಂಡಿದೆ.

''ಜೀವನದ ಜೊತೆಯೂ, ಜೀವನದ ನಂತರವೂ'' ಎಂದು ನಂಬಿದ್ದ ಕೋಟ್ಯಂತರ ಪಾಲಿಸಿದಾರರ ನಂಬಿಕೆಗೆ ಮೋದಿ ಸರ್ಕಾರ ಈ ಮೂಲಕ ಅಕ್ಷರಶಃ ದ್ರೋಹ ಬಗೆದಿದೆ. ಈ ಶೇ. 6.5ರಷ್ಟು ಷೇರು ಮಾರಾಟದ ಮೂಲಕ ಷೇರುಪೇಟೆಗೆ ಪ್ರವೇಶಿಸಿದ ನಂತರ, ಸಂಸ್ಥೆಯ ಪ್ರಾಥಮಿಕ ಆದ್ಯತೆಯು ಪಾಲಿಸಿದಾರರ ಹಿತರಕ್ಷಣೆಗಿಂತ ಹೆಚ್ಚಾಗಿ ಬಂಡವಾಳಶಾಹಿ ಷೇರುದಾರರ ಲಾಭದ ಕಡೆಗೆ ವಾಲುತ್ತದೆ. ಇದರಿಂದಾಗಿ ಭವಿಷ್ಯದಲ್ಲಿ ಜನಸಾಮಾನ್ಯರಿಗೆ ಸಿಗುತ್ತಿದ್ದ ಬೋನಸ್ ಮತ್ತು ಆರ್ಥಿಕ ರಕ್ಷಣೆಯು ಕಾರ್ಪೊರೇಟ್ ಕುಳಗಳ ಪಾಲಾಗುವ ಗಂಭೀರ ಅಪಾಯವನ್ನು ಸರ್ಕಾರ ಉದ್ದೇಶಪೂರ್ವಕವಾಗಿಯೇ ಸೃಷ್ಟಿಸಿದೆ.

''ಸರ್ಕಾರವು ವ್ಯಾಪಾರ ಮಾಡುವ ಸಂಸ್ಥೆಯಲ್ಲ'' ಎಂದು ಹೇಳುವ ಮೂಲಕ ಮೋದಿ ಸರ್ಕಾರ ತನ್ನ ಖಾಸಗೀಕರಣದ ಅಜೆಂಡಾವನ್ನು ಸಮರ್ಥಿಸಿಕೊಳ್ಳುತ್ತಿದೆ. ಆದರೆ, ವಾಸ್ತವದಲ್ಲಿ ಇದು ಗಗನಕ್ಕೇರುತ್ತಿರುವ ವಿತ್ತೀಯ ಕೊರತೆಯನ್ನು ಮುಚ್ಚಿಹಾಕುವ ಯತ್ನವಾಗಿದೆ. ನಿರುದ್ಯೋಗ ನಿವಾರಣೆ, ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣದುಬ್ಬರ ನಿಯಂತ್ರಣದಂತಹ ಕರ್ತವ್ಯಗಳಲ್ಲಿ ಸಂಪೂರ್ಣ ವಿಫಲವಾಗಿರುವ ಈ ಆಡಳಿತವು, ಈಗ ತಲೆಮಾರುಗಳಿಂದ ಕಾಪಾಡಿಕೊಂಡು ಬಂದಿದ್ದ ರಾಷ್ಟ್ರೀಯ ಸಂಪತ್ತಿನ ಒಂದೊಂದೇ ಭಾಗವನ್ನು ಮಾರಾಟ ಮಾಡಿ ದಿನದೂಡುತ್ತಿದೆ. ಇದು ಬಂಡವಾಳಶಾಹಿ ಸ್ನೇಹಿತರಿಗೆ ದೇಶದ ಸಂಪತ್ತನ್ನು ಹಸ್ತಾಂತರಿಸುವ ಅಧಿಕೃತ ಕಾರ್ಪೊರೇಟ್ ಲೂಟಿಯಾಗಿದೆ.

''ದೇಶವನ್ನು ಮಾರಲು ಬಿಡುವುದಿಲ್ಲ'' ಎಂಬ ಮೋದಿಯವರ ಘೋಷಣೆಯು ಈ ಶತಮಾನದ ಅತಿ ದೊಡ್ಡ ಭರವಸೆಯ ವಂಚನೆ. ಕೇವಲ 5 ಕೋಟಿ ರೂಪಾಯಿಯಿಂದ ಬೆಳೆದು 2.75 ಲಕ್ಷ ಕೋಟಿಯ ಸ್ವಂತ ಮೌಲ್ಯವಿರುವ ಭವ್ಯ ಸಂಸ್ಥೆಯ ಶೇ. 6.5ರಷ್ಟು ಪಾಲನ್ನು ಮಾರಿ 31 ಸಾವಿರ ಕೋಟಿ ಜೇಬಿಗಿಳಿಸಿಕೊಂಡಿದೆ. ಭಾರತ್ ಬೇಚೋ ಕೇವಲ ವಿಪಕ್ಷಗಳ ಆರೋಪವಲ್ಲ, ಅದು ಮೋದಿ ಸರ್ಕಾರದ ಆಡಳಿತದಲ್ಲಿ ದೇಶ ಅನುಭವಿಸುತ್ತಿರುವ ಆರ್ಥಿಕ ವಿನಾಶದ ಕಟು ವಾಸ್ತವ.

ಎಸ್‌ಐಆರ್ ಸ್ವಂತ ಮನೆಯಲ್ಲಿದ್ದರೂ 'ಶಿಫ್ಟ್, ಆಬ್ಸೆಂಟ್' ಎಂದು ಬರೆದು ಓಟ್ ಡಿಲೀಟ್

ಈಗ ಎರಡೇ ದಿನ ಬಾಕಿ ಇರುವುದು? ಅಷ್ಟರಲ್ಲಿ ಎಲ್ಲವನ್ನೂ ಸರಿ ಮಾಡಲು ಸಾಧ್ಯವಿಲ್ಲ. ಕೂಡಲೇ ಎಸ್‌ಐಆರ್ ಅನ್ನು ಒಂದು ತಿಂಗಳು ಮುಂದೂಡಿ, ನೀವು ಮಾಡಿದ ತಪ್ಪುಗಳನ್ನು ಸರಿಪಡಿಸಿ. ಇಲ್ಲದಿದ್ರೆ ಜನರ ಕೋಪ ಎದುರಿಸಬೇಕಷ್ಟೇ!

ರಾಜ್ಯದ 1 ಕೋಟಿ 10 ಲಕ್ಷ ಮತದಾರರನ್ನು ಎಎಸ್‌ಡಿಡಿಓ ಪಟ್ಟಿಗೆ ಸೇರಿಸಿ ಚುನಾವಣಾ ಆಯೋಗ ಯಡವಟ್ಟು ಮಾಡಿದೆ. ಅದರ ವಿವರ ಇಲ್ಲಿದೆ ನೋಡಿ.

ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ಪಾರ್ಟ್ ನಂಬರ್ 72ರಲ್ಲಿ ಹಿರಿಯ ದಲಿತ ಮುಖಂಡರಾದ, ಪತ್ರಕರ್ತರಾದ ಇಂದೂಧರ ಹೊನ್ನಾಪುರರವರು ನೆಲೆಸಿದ್ದಾರೆ. ಅವರು ಆಗಸ್ಟ್ 2ರಂದು ಅವರ ಮನೆಯ 5 ಜನರ ಎನ್ಯುಮರೇಷನ್ ಫಾರ್ಮ್ ತುಂಬಿಕೊಟ್ಟಿದ್ದಾರೆ. ಆರ್‌ಐಗೆ ತಡವಾಗಿ ಕೊಡುತ್ತಿದ್ದೇನೆ ಎಂದು ತಪ್ಪು ಮಾಡಬೇಡಿ, ಸರಿಯಾಗಿ ತುಂಬಿ ಎಂದು ಹೇಳಿಕೊಟ್ಟಿದ್ದಾರೆ. ಆದರೆ ಅವರನ್ನು ಪರ್ಮನೆಂಟ್ಲಿ ಶಿಫ್ಟೆಡ್ ಎಂದು ಈಗಾಗಲೇ ತುಂಬಿಬಿಟ್ಟಿದ್ದಾರೆ. ಅವರ ಮನೆಯ 4 ಮತಗಳನ್ನು ಎಎಸ್‌ಡಿಡಿಓ ಪಟ್ಟಿಗೆ ಸೇರಿಸಿಬಿಟ್ಟಿದ್ದಾರೆ.. ಏಕಿಷ್ಟು ಆತುರ? ಚುನಾವಣಾ ಆಯೋಗದ ಅಧಿಕಾರಿಗಳೇ ಏನ್ ಮಾಡ್ತಾ ಇದ್ದೀರಿ? ಮನಬಂದಂತೆ ಡಿಲೀಟ್ ಮಾಡಲು ನಿಮಗೆ ಅವಕಾಶ ಕೊಟ್ಟವರು ಯಾರು?

ಇಂದೂಧರ ಸರ್ ವಿದ್ಯಾವಂತರು. ಅವರು ಚೆಕ್ ಮಾಡಿ ಏಕೆ ಹೀಗೆ ಮಾಡಿದ್ದಾರೆ ಎಂದು ಪ್ರಶ್ನಿಸುತ್ತಿದ್ದಾರೆ. ಆದರೆ



ಎಷ್ಟೊ ಜನ ಅವಿದ್ಯಾವಂತರು, ಬಡವರು ಹೇಗೆ ಚೆಕ್ ಮಾಡಲು ಸಾಧ್ಯ? ಅವರ ವೋಟು ಕಿತ್ತುಕೊಳ್ಳುವುದು ಸರಿಯೇ?

ಎರಡನೇ ಉದಾಹರಣೆ ನೋಡಿ. ಬಸವನಗುಡಿ ವಿಧಾನಸಭಾ ಕ್ಷೇತ್ರದ ಎ. ನಾರಾಯಣ. ಚಿಂತಕರು ಮತ್ತು ಪ್ರಾಧ್ಯಾಪಕರು, ಪ್ರಜಾವಾಣಿಯಲ್ಲಿ ಕಾಲಂ ಬರೆಯುತ್ತಾರೆ. ಅವರು 2002ರ ಡೇಟಾ ಹುಡುಕಿ ಹುಡುಕಿ ಸುಸ್ತಾಗಿ ಸಿಗದೇ ಮ್ಯಾಪಿಂಗ್ ಕಾಲಂ ಖಾಲಿ ಬಿಟ್ಟು, ಕೆಳಗಿನ ಕಾಲಂಗಳನ್ನು ತುಂಬಿ ಎನ್ಯುಮರೇಷನ್ ಫಾರ್ಮ್ ವಾಪಸ್ ಕೊಟ್ಟಿದ್ದಾರೆ. ಆದರೆ ಎಎಸ್‌ಡಿಡಿಓ ಲಿಸ್ಟ್‌ನಲ್ಲಿ ಅವರ ಮತ್ತು ಅವರ ಪತ್ನಿಯ ಹೆಸರು ಬಂದಿದೆ. ಅನ್‌ಟ್ರೇಸಬಲ್, ಆಬ್ಸೆಂಟ್ ಎಂದು ಬರೆದು ಅವರ ಹೆಸರು ಡಿಲೀಟ್ ಮಾಡುವ ಹುನ್ನಾರ ನಡೆದಿದೆ. ಏಕೆ? 8ನೇ ತಾರೀಖಿನವರೆಗೂ ಇನ್ನೂ ಎನ್ಯುಮರೇಷನ್ ಫಾರ್ಮ್ ಕೊಡಬಹುದು ಅಲ್ಲವೇ? ಅದಕ್ಕಿಂತ ಮುಂಚೆ ಡಿಲೀಟ್ ಮಾಡುವ ಧಾವಂತವೇಕೆ?

ಮೂರನೇಯ ಉದಾಹರಣೆ ನೋಡಿ. ಬೆಂಗಳೂರಿನ ವಿಜಯನಗರ ವಿಧಾನಸಭಾ ಕ್ಷೇತ್ರ. ಇಲ್ಲಿ ಸುಮಾರು 3 ಲಕ್ಷ ಮತದಾರರಿದ್ದರೆ ಸುಮಾರು 2 ಲಕ್ಷ 80 ಸಾವಿರದಷ್ಟು ಜನರನ್ನು ಎಎಸ್‌ಡಿಡಿಓ ಪಟ್ಟಿಗೆ ಸೇರಿಸಲಾಗಿದೆ. ಅಂದರೆ 90% ಎಎಸ್‌ಡಿಡಿಓ ಹೇಗೆ ಸಾಧ್ಯ? ಅಲ್ಲಿ ಮ್ಯಾಪಿಂಗ್ ಆಗಿರುವವರ ಹೆಸರನ್ನು ಸಹ ಸೇರಿಸಲಾಗಿದೆ. ಈ ಬಗ್ಗೆ ಬಿಎಲ್‌ಓ ಕೇಳಿದರೆ ನಮಗೆ ಗೊತ್ತಿಲ್ಲ, ನಾನು ಸರಿಯಾಗಿ ತುಂಬಿದ್ದೀನಿ, ಎಆರ್‌ಓಗೆ ಕಳಿಸಿದ್ದೀನಿ. ಆದರೂ ಹೀಗೆ ಏಕೆ ಬಂದಿದೆ ಗೊತ್ತಿಲ್ಲ, ನನ್ನ ತಪ್ಪಿಲ್ಲ ಎಂದು ಅಳುತ್ತಾರೆ. ನಾನು ಎಷ್ಟು ಮಾಡಲು ಸಾಧ್ಯ ಎಂದು ಗೋಳಿಡುತ್ತಾರೆ. ಎಆರ್‌ಓಗೆ ಫೋನ್ ಮಾಡಿದರೆ ತೆಗೆದುಕೊಳ್ಳುತ್ತಿಲ್ಲ

ನಾವೇ ಪ್ರಥಮ, ನಾವೇ ಫಸ್ಟ್ ಎಂದು ತೋರಿಸಿಕೊಳ್ಳುವ ಧಾವಂತದಲ್ಲಿ ಮಿಸ್ಟರ್ ಅನ್ಬುಕುಮಾರ್ ಅವರು ಮಾಡಿದ ತಪ್ಪು ಇದು. ಪ್ರಗತಿ ತೋರಿಸದಿದ್ದರೆ ಎಫ್‌ಐಆರ್ ಹಾಕುತ್ತೇವೆ ಎಂದು ಹೆದರಿಸಿ ಬಿಎಲ್‌ಓಗಳ ಮೇಲೆ ಒತ್ತಡ ತಂದರು. ಸರಿಯಾಗಿ ತರಬೇತಿ ನೀಡಲಿಲ್ಲ. ಅವರು ಸಿಕ್ಕ ಸಿಕ್ಕವರನ್ನು ಶಿಫ್ಟೆಡ್ ಎಂದು ಸಿಗದವರನ್ನು ಆಬ್ಸೆಂಟ್ ಎಂದು ಬರೆದು ಡಿಲೀಟ್ ಮಾಡಿಸುತ್ತಿದ್ದಾರೆ. ಇದನ್ನು ಎಸ್‌ಐಆರ್ ಎನ್ನಲಾಗುತ್ತದೆಯೇ? ಮಾಸ್ ಡಿಲೀಟ್ ಕ್ಯಾಂಪೇನ್ ಎಂದು ಕರೆಯಬಹುದಲ್ಲವೇ?

ಈಗ ಎರಡೇ ದಿನ ಬಾಕಿ ಇರುವುದು? ಅಷ್ಟರಲ್ಲಿ ಎಲ್ಲವನ್ನೂ ಸರಿ ಮಾಡಲು ಸಾಧ್ಯವಿಲ್ಲ. ಕೂಡಲೇ ಎಸ್‌ಐಆರ್ ಅನ್ನು ಒಂದು ತಿಂಗಳು ಮುಂದೂಡಿ, ನೀವು ಮಾಡಿದ ತಪ್ಪುಗಳನ್ನು ಸರಿಪಡಿಸಿ. ಇಲ್ಲದಿದ್ರೆ ಜನರ ಕೋಪ ಎದುರಿಸಬೇಕಷ್ಟೇ!

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR